# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 107 | ರಾಯಚೂರು Raichur 09-10-2026 | ಶುಕ್ರವಾರ Friday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685


## ಮಾಜಿ ಸಂಸದ ಎಚ್.ಜಿ. ರಾಮುಲು ಅವರಿಗೆ ಜನ್ಮದಿನದ ಶುಭಾಶಯ



ರಾಯಚೂರು: ಮಾಜಿ ಸಂಸದ ಹಾಗೂ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಎಚ್.ಜಿ. ರಾಮುಲು ಅವರ ಜನ್ಮದಿನದ ಅಂಗವಾಗಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಮತ್ತು ಶಾಸಕ ಹಂಪಯ್ಯ ನಾಯಕ ಅವರು ಭೇಟಿ ನೀಡಿ ಶುಭ ಹಾರೈಸಿದರು.

ಬೂದುಗುಂಪಾ ಕ್ರಾಸ್ ಸಮೀಪದಲ್ಲಿರುವ ಎಚ್.ಜಿ. ರಾಮುಲು ಅವರ ನಿವಾಸಕ್ಕೆ ತೆರಳಿದ ನಾಯಕರು, ಅವರನ್ನು ಸನ್ಮಾನಿಸಿ ಜನ್ಮದಿನದ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಜಯಂತ್‌ರಾವ್ ಪತಂಗೆ ಸೇರಿದಂತೆ ಪಕ್ಷದ ವಿವಿಧ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮತ ಕಳ್ಳತನ ಆರೋಪದ ವಿರುದ್ಧ ರಾಜ್‌ಘಾಟ್‌ನಲ್ಲಿ ಇಂಡಿಯಾ ಮೈತ್ರಿಕೂಟ ಪ್ರತಿಭಟನೆ

ನವದೆಹಲಿ: ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಮತ ಕಳ್ಳತನ ಹಾಗೂ ಪ್ರಜಾಪ್ರಭುತ್ವ ದುರ್ಬಲಗೊಳಿಸುವ ಆರೋಪಗಳನ್ನು ಮುಂದಿಟ್ಟುಕೊಂಡು ಇಂಡಿಯಾ ಮೈತ್ರಿಕೂಟದ ನಾಯಕರು ಗುರುವಾರ ರಾಜ್‌ಘಾಟ್‌ನಲ್ಲಿ ಶಾಂತಿಯುತ ಪ್ರತಿಭಟನೆ ನಡೆಸಿದರು.

ಪ್ರತಿಭಟನಾ ಮೆರವಣಿಗೆಯ ಮೂಲಕ ರಾಜ್ ಘಾಟ್‌ಗೆ ತೆರಳಿದ ವಿರೋಧ ಪಕ್ಷಗಳ ನಾಯಕರು ಮಹಾತ್ಮ ಗಾಂಧೀಜಿಯವರ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿದರು. ಬಳಿಕ ಪ್ರಜಾಪ್ರಭುತ್ವ ಮತ್ತು ಮತದಾರರ ಹಕ್ಕುಗಳ ರಕ್ಷಣೆಗೆ ಒತ್ತಾಯಿಸಿ ಧರಣಿ ನಡೆಸಿದರು. ಕೇಂದ್ರ ಸರ್ಕಾರ ಹಾಗೂ ಮುಖ್ಯ ಚುನಾವಣಾ ಆಯುಕ್ತರಿಗೆ ಸದ್ಬುದ್ಧಿ ನೀಡುವಂತೆ ಪ್ರಾರ್ಥನೆ ಸಲ್ಲಿಸಿದ್ದಾಗಿ ನಾಯಕರು ತಿಳಿಸಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ರಾಜೀನಾಮೆ ನೀಡುವವರೆಗೂ ಹೋರಾಟ ಮುಂದುವರಿಸಲಾಗುವುದು



ಎಂದು ಇಂಡಿಯಾ ಮೈತ್ರಿಕೂಟದ ನಾಯಕರು ಘೋಷಿಸಿದರು. ಶುಕ್ರವಾರವೂ ಪ್ರತಿಭಟನೆ ಮುಂದುವರಿಯಲಿದೆ ಎಂದು ಅವರು ತಿಳಿಸಿದರು.

ಕಾಂಗ್ರೆಸ್ ನಾಯಕ ಪವನ್ ಖೇರಾ ಮಾತನಾಡಿ, ದೇಶದ ಪ್ರತಿಯೊಬ್ಬ ಮತದಾರನ ಹಕ್ಕು ಹಾಗೂ ಪ್ರಜಾಪ್ರಭುತ್ವದ ರಕ್ಷಣೆಗೆ ಇಂಡಿಯಾ ಮೈತ್ರಿಕೂಟ ಬದ್ಧವಾಗಿದೆ ಎಂದು ಹೇಳಿದರು.

ಸಿಪಿಐ-ಎಂ ನಾಯಕ ಜಾನ್ ಬ್ರಿಟ್ಟಾಸ್ ಮಾತನಾಡಿ, ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಪಡೆಯುವವರೆಗೂ ಪ್ರತಿಭಟನೆ ನಿಲ್ಲುವುದಿಲ್ಲ ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮುಖ್ಯ ಚುನಾವಣಾ ಆಯುಕ್ತರನ್ನು ರಕ್ಷಿಸುತ್ತಿದ್ದಾರೆ ಎಂಬ ಆರೋಪವನ್ನೂ ಅವರು ಮಾಡಿದರು.

ಸಿಪಿಐ ನಾಯಕ ಪಿ. ಸಂತೋಷ್ ಕೂಡ ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಆಗ್ರಹಿಸಿ, ಅದು ದೇಶದ ಹಿತದೃಷ್ಟಿಯಿಂದ ಅಗತ್ಯ ಎಂದು ಅಭಿಪ್ರಾಯಪಟ್ಟರು. ಸಿಪಿಐ-ಎಂ ನಾಯಕ ವಿ. ಶಿವದಾಸನ್ ಮಾತನಾಡಿ, ಈ ವಿಚಾರದಲ್ಲಿ ವಿರೋಧ ಪಕ್ಷಗಳ ಒಗ್ಗಟ್ಟು ಅಚಲವಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಆರೋಪ ಹಾಗೂ ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಆಗ್ರಹಿಸಿ ವಿರೋಧ ಪಕ್ಷಗಳು ನಡೆಸುತ್ತಿರುವ ಪ್ರತಿಭಟನೆ ಗುರುವಾರ ಮೂರನೇ ದಿನಕ್ಕೆ ಮುಂದುವರಿಯಿತು.

# ಕನ್ನಡ ಸಂಘದ ಎದುರು ನಾಳೆಯಿಂದ ಹೊಸ 'ಆಧಾರ್ ಸೇವಾ ಕೇಂದ್ರ' ಆರಂಭ: ಜಿಲ್ಲಾಧಿಕಾರಿ ಪೂವಿತಾ ಎಸ್. ಉದ್ಘಾಟನೆ



ರಾಯಚೂರು ಅ. 08 (ಕರ್ನಾಟಕ ವಾರ್ತೆ): ನಗರದ ವಾಸವಿನಗರ ರಸ್ತೆಯಲ್ಲಿರುವ ಕನ್ನಡ ಸಂಘದ ಕಚೇರಿ ಎದುರುಗಡೆ ನೂತನ 'ಆಧಾರ್ ಸೇವಾ ಕೇಂದ್ರ' (UIAI) ಪ್ರಾರಂಭವಾಗುತ್ತಿದ್ದು, (ಅ. 09, ಶುಕ್ರವಾರ) ಬೆಳಿಗ್ಗೆ 11-00 ಗಂಟೆಗೆ ಚಾಲನೆ ಸಿಗಲಿದೆ.

ಈ ನೂತನ ಸೇವಾ ಕೇಂದ್ರವನ್ನು ರಾಯಚೂರು ಜಿಲ್ಲಾಧಿಕಾರಿಗಳಾದ ಶ್ರೀಮತಿ ಪೂವಿತಾ ಎಸ್. ಅವರು ಅಧಿಕೃತವಾಗಿ ಉದ್ಘಾಟಿಸಲಿದ್ದಾರೆ.

ನಗರ ಹಾಗೂ ಸುತ್ತಮುತ್ತಲಿನ ಸಾರ್ವಜನಿಕರಿಗೆ ಆಧಾರ್ ನೋಂದಣಿ, ತಿದ್ದುಪಡಿ ಹಾಗೂ ಇತರೆ ಆಧಾರ್ ಸಂಬಧಿತ ಸೇವೆಗಳು ಸುಲಭವಾಗಿ ದೊರೆಯುವಂತಾಗಲು ಈ ಕೇಂದ್ರವನ್ನು ಆರಂಭಿಸಲಾಗುತ್ತಿದೆ. ಸಾರ್ವಜನಿಕರು ಈ ಕೇಂದ್ರದ ಸೌಲಭ್ಯವನ್ನು ಪಡೆದುಕೊಳ್ಳಬೇಕಾಗಿ ಆಧಾರ್ ಕೇಂದ್ರದ ವ್ಯವಸ್ಥಾಪಕರಾದ ಗಿರೀಶ್ ಕೆ. ಜೆ. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬರದಿಂದ ನಲುಗಿದ ರೈತರ ನೆರವಿಗೆ ಸರ್ಕಾರ ಬದ್ಧ: ಡಾ. ಜಿ. ಪರಮೇಶ್ವರ

ರಾಯಚೂರು, ಅ.8: ರಾಜ್ಯದ ಬಹುತೇಕ ಪ್ರದೇಶಗಳಲ್ಲಿ ಮಳೆಯ ಕೊರತೆಯಿಂದ ಬರ ಪರಿಸ್ಥಿತಿ ತೀವ್ರಗೊಂಡಿದ್ದು, ಬೆಳೆ ಹಾನಿಯಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ರೈತರು ಹಾಗೂ ಕೃಷಿ ಕೂಲಿ ಕಾರ್ಮಿಕರ ನೆರವಿಗೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಡಾ. ಜಿ. ಪರಮೇಶ್ವರ ಹೇಳಿದರು.



ಗುರುವಾರ ರಾಯಚೂರು ಜಿಲ್ಲೆಯ ಮಸ್ಕಿ ವಿಧಾನಸಭಾ ಕ್ಷೇತ್ರದ ಉಮಲೂಟಿ ಹಾಗೂ ಕಲಮಂಗಿ ಗ್ರಾಮಗಳಿಗೆ ಭೇಟಿ ನೀಡಿದ ಅವರು, ಮಳೆಯ ಅಭಾವದಿಂದ ಹಾನಿಗೊಳಗಾಗಿರುವ ಕೃಷಿ ಬೆಳೆಗಳನ್ನು ಖುದ್ದಾಗಿ ಪರಿಶೀಲಿಸಿ ರೈತರ ಸಮಸ್ಯೆಗಳನ್ನು ಆಲಿಸಿದರು.

ಮೊದಲಿಗೆ ಉಮಲೂಟಿ ಗ್ರಾಮದ ಸರ್ವೇ ನಂಬರ್ 92ರ ವ್ಯಾಪ್ತಿಯ ಸುಮಾರು 20 ಎಕರೆ ಪ್ರದೇಶದಲ್ಲಿ ರೈತ ಹನುಮಪ್ಪ ಅವರ ಜಮೀನಿನಲ್ಲಿ ಬೆಳೆದಿದ್ದ ತೊಗರಿ ಬೆಳೆಯನ್ನು ವೀಕ್ಷಿಸಿದರು. ನಂತರ ಕಲಮಂಗಿ ಗ್ರಾಮದ ಸರ್ವೇ ನಂಬರ್ 14ರಲ್ಲಿರುವ ನಾಗಮ್ಮ ಶರಣೇಗೌಡ ಅವರ ಜಮೀನಿಗೆ ತೆರಳಿ ಬೆಳೆಗಳ ಸ್ಥಿತಿಗತಿ ಪರಿಶೀಲಿಸಿದರು. ಈ ವೇಳೆ ಮಳೆಯ ಕೊರತೆಯಿಂದ ಉಂಟಾಗಿರುವ ನಷ್ಟ, ಕೃಷಿಗೆ ಮಾಡಿರುವ ಖರ್ಚು ಹಾಗೂ ರೈತರು ಎದುರಿಸುತ್ತಿರುವ ಆರ್ಥಿಕ ತೊಂದರೆಗಳ ಕುರಿತು ಮಾಹಿತಿ ಪಡೆದುಕೊಂಡರು.

ರೈತರೊಂದಿಗೆ ಮಾತನಾಡಿದ ಅವರು, ರಾಜ್ಯದ 240 ತಾಲೂಕುಗಳ ಪೈಕಿ 217 ತಾಲೂಕುಗಳನ್ನು ಈಗಾಗಲೇ ಬರಪೀಡಿತ ಎಂದು ಘೋಷಿಸಲಾಗಿದೆ. ಉಳಿದ ಪ್ರದೇಶಗಳಲ್ಲಿಯೂ ಮಳೆ ಕೊರತೆಯ ಪರಿಣಾಮ ಕಂಡುಬರುತ್ತಿದೆ. ಕರಾವಳಿ ಭಾಗವನ್ನು ಹೊರತುಪಡಿಸಿದರೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆಯ ಅಭಾವದಿಂದ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕಿವೆ. ಭೂಮಿಯಲ್ಲಿ ತೇವಾಂಶ ಕಡಿಮೆಯಾಗಿರುವುದರಿಂದ ಬಿತ್ತನೆ ಮಾಡಿದ ಬೆಳೆಗಳು ಒಣಗುತ್ತಿದ್ದು, ರೈತರು ತೀವ್ರ ನಷ್ಟ ಅನುಭವಿಸುವಂತಾಗಿದೆ ಎಂದು ತಿಳಿಸಿದರು.

ಸುಮಾರು 125 ವರ್ಷಗಳ ಹಿಂದೆ ಇಂತಹ ಭೀಕರ ಬರ ಪರಿಸ್ಥಿತಿ ಎದುರಾಗಿತ್ತು ಎಂದು ಹಿರಿಯರು ಸ್ಮರಿಸುತ್ತಾರೆ. ಪ್ರಸ್ತುತ ಮಳೆಯ ಕೊರತೆಯಿಂದ ಕೃಷಿ ಕ್ಷೇತ್ರಕ್ಕೆ ಭಾರಿ ಹೊಡೆತ ಬಿದ್ದಿದ್ದು, ರೈತರ ಬದುಕಿನ ಮೇಲೂ ಪರಿಣಾಮ ಉಂಟಾಗಿದೆ. ಸಾಲ ಮಾಡಿ ಬಿತ್ತನೆ ಕೈಗೊಂಡಿರುವ ರೈತರು ನಿರೀಕ್ಷಿತ ಫಸಲು ದೊರೆಯದ ಕಾರಣ ಸಾಲ ಮರುಪಾವತಿ ಮಾಡುವುದಕ್ಕೂ ಪರದಾಡುವಂತಾಗಿದೆ ಎಂದು ಹೇಳಿದರು.

ಬರ ಪರಿಸ್ಥಿತಿಯನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಜೂನ್ ತಿಂಗಳಲ್ಲಿಯೇ ಸಚಿವರು ಹಾಗೂ ಹಿರಿಯ ಅಧಿಕಾರಿಗಳ ಸಭೆ ನಡೆಸಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಚರ್ಚಿಸಲಾಗಿದೆ. ಅಲ್ಲದೆ, ಬರ ನಿರ್ವಹಣೆಗೆ ಸಂಬಂಧಿಸಿದಂತೆ ವಿರೋಧ ಪಕ್ಷಗಳ ಅಭಿಪ್ರಾಯ ಪಡೆಯಲು ವಿಧಾನಸೌಧದಲ್ಲಿ ಮೂರು ದಿನಗಳ ವಿಶೇಷ ಅಧಿವೇಶನ ನಡೆಸಲಾಗಿದೆ ಎಂದು ವಿವರಿಸಿದರು.

ಬರದಿಂದ ಸಂಕಷ್ಟಕ್ಕೆ 2ನೇ ಪುಟಕ್ಕೆ

# ರಸ್ತೆ ಅಪಘಾತ: ಯುವಕ ಸ್ಥಳದಲ್ಲೇ ಸಾವು

ರಾಯಚೂರು: ಜಿಲ್ಲೆಯ ಲಿಂಗಸುಗೂರು ತಾಲೂಕಿನ ಮುದಗಲ್ ಸಮೀಪದ ಇಲಕಲ್‌ಮುದಗಲ್ ಮುಖ್ಯ ರಸ್ತೆಯಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೋಟಾರ್‌ಸೈಕಲ್ ಸವಾರನೊಬ್ಬ ಸ್ಥಳದಲ್ಲೇ ಮೃತಪಟ್ಟಿದ್ದು, ಮತ್ತೊಬ್ಬ ಸವಾರ ಗಂಭೀರವಾಗಿ ಗಾಯಗೊಂಡಿರುವ ಘಟನೆ ಕನಸಾವಿ ಕ್ರಾಸ್ ಬಳಿ ನಡೆದಿದೆ.

ಅಪಘಾತದಲ್ಲಿ ಶಶಿಕುಮಾರ ಲಕ್ಷ್ಮಣ (28) ಮೃತಪಟ್ಟ ಯುವಕನಾಗಿದ್ದು, ಮಹಾಂತೇಶ ಶೇಖರಯ್ಯ ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುವನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.

ಇಲಕಲ್‌ಮುದಗಲ್ ಮುಖ್ಯ ರಸ್ತೆಯ ಕನಸಾವಿ ಕ್ರಾಸ್ ಬಳಿ ಮೋಟಾರ್‌ಸೈಕಲ್‌ಗೆ ಕಂಟೇನರ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಡಿಕ್ಕಿಯ ತೀವ್ರತೆಗೆ ಶಶಿಕುಮಾರ ಸ್ಥಳದಲ್ಲೇ ಮೃತಪಟ್ಟರೆ, ಮತ್ತೊಬ್ಬ ಸವಾರ ಮಹಾಂತೇಶ ಗಂಭೀರ ಗಾಯಗೊಂಡಿದ್ದಾರೆ.

ಕಂಟೇನರ್ ವಾಹನದ ಅತಿವೇಗ ಹಾಗೂ ಚಾಲಕನ ಅಜಾಗರೂಕ ಚಾಲನೆಯೇ ಅಪಘಾತಕ್ಕೆ ಕಾರಣವೆಂದು ಆರೋಪಿಸಲಾಗಿದೆ. ಅಪಘಾತ ಸಂಭವಿಸಿದ ತಕ್ಷಣ ಕಂಟೇನರ್ ವಾಹನವನ್ನು ಸ್ಥಳದಲ್ಲೇ ಬಿಟ್ಟು ಚಾಲಕ



ಪರಾರಿಯಾಗಿದ್ದಾನೆ ಎಂದು ತಿಳಿದುಬಂದಿದೆ.

ಘಟನೆಯ ಮಾಹಿತಿ ತಿಳಿದ ಮುದಗಲ್ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತಕ್ಕೀಡಾದ ವಾಹನಗಳ ಕುರಿತು ಮಾಹಿತಿ ಸಂಗ್ರಹಿಸಿ, ಘಟನೆಗೆ ಕಾರಣವಾದ ಅಂಶಗಳ ಬಗ್ಗೆ ತನಿಖೆ ಕೈಗೊಂಡಿದ್ದಾರೆ.

ಈ ಸಂಬಂಧ ಮುದಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅಪಘಾತದ ಬಳಿಕ ಪರಾರಿಯಾಗಿರುವ ಕಂಟೇನರ್ ಚಾಲಕನ ಪತ್ತೆಗಾಗಿ ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ.

ಅಪಘಾತದ ನಿಖರ ಕಾರಣ ಹಾಗೂ ಘಟನೆ ನಡೆದ ಸಂದರ್ಭದ ಕುರಿತು ಪೊಲೀಸ್ ತನಿಖೆಯಿಂದ ಹೆಚ್ಚಿನ ಮಾಹಿತಿ ಹೊರಬರಬೇಕಿದೆ.

# ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಪ್ರತಿಭಟನೆ

ರಾಯಚೂರು, ಅ.8: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಚುನಾವಣಾ ಪ್ರಕ್ರಿಯೆಯಲ್ಲಿ ಪಕ್ಷಪಾತ ಧೋರಣೆ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿ, ಅವರ ರಾಜೀನಾಮೆಗೆ ಒತ್ತಾಯಿಸಿ ಕಾಂಗ್ರೆಸ್ ಪಕ್ಷ ಹಾಗೂ ಇಂಡಿಯಾ ಒಕ್ಕೂಟದ ಮುಖಂಡರು ಗುರುವಾರ ನಗರದ ಗಂಜ್ ವೃತ್ತದಲ್ಲಿ ಕಪ್ಪುಪಟ್ಟಿ ಧರಿಸಿ, ಮಾನವ ಸರಪಳಿ ನಿರ್ಮಿಸುವ ಮೂಲಕ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕೇಂದ್ರ ಬಿಜೆಪಿ ಸರ್ಕಾರ ಮತ್ತು ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ದೇಶದಲ್ಲಿ ಸ್ವತಂತ್ರ ಹಾಗೂ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕಾದ ಚುನಾವಣಾ ಆಯೋಗವು ತನ್ನ ತಟಸ್ಥತೆಯನ್ನು ಕಳೆದುಕೊಂಡಿದ್ದು, ಕೇಂದ್ರ




ಸರ್ಕಾರದ ಪರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಆರೋಪಿಸಿದರು.

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಇಂಡಿಯಾ ಒಕ್ಕೂಟದ 500ಕ್ಕೂ ಹೆಚ್ಚು ಸಂಸದರು ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ಪ್ರಶ್ನಿಸಿ ಪ್ರತಿಭಟನೆ ನಡೆಸಿದ್ದರು. ಈ ಸಂದರ್ಭದಲ್ಲಿ ಮುಖ್ಯ ಚುನಾವಣಾ ಆಯುಕ್ತರನ್ನು ಭೇಟಿಯಾಗಲು ಮುಂದಾದ ಸಂಸದರಿಗೆ ಅವಕಾಶ ನೀಡದೆ, ಪೊಲೀಸರ ಮೂಲಕ ಬಲಪ್ರಯೋಗ ನಡೆಸಿ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಆರೋಪಿಸಿದ ಮುಖಂಡರು, ಈ ಕ್ರಮವನ್ನು ತೀವ್ರವಾಗಿ ಖಂಡಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಪಕ್ಷಗಳಿಗೆ ಸರ್ಕಾರದ ನೀತಿ ಹಾಗೂ ಸಾಂವಿಧಾನಿಕ ಸಂಸ್ಥೆಗಳ ಕಾರ್ಯವೈಖರಿಯನ್ನು ಪ್ರಶ್ನಿಸುವ ಹಕ್ಕಿದೆ. ಆದರೆ, ಜನಪ್ರತಿನಿಧಿಗಳ ಧ್ವನಿಯನ್ನು ಹತ್ತಿಕ್ಕಲು ಪೊಲೀಸ್ ವ್ಯವಸ್ಥೆಯನ್ನು ಬಳಸಿಕೊಳ್ಳುತ್ತಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ. ಇಂತಹ ಬೆಳವಣಿಗೆಗಳು 2ನೇ ಪುಟಕ್ಕೆ

# ರೈತರನ್ನು ಸಂಕಷ್ಟಕ್ಕೆ ಸಿಲುಕಲು ಬಿಡುವುದಿಲ್ಲ, ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ: ಡಾ. ಜಿ. ಪರಮೇಶ್ವರ್

ರಾಯಚೂರು, ಅ.8: ಬರ ಪರಿಸ್ಥಿತಿಯಿಂದ ತೀವ್ರ ಸಂಕಷ್ಟ ಎದುರಿಸುತ್ತಿರುವ ರೈತರು, ಕೃಷಿ ಕೂಲಿ ಕಾರ್ಮಿಕರು ಹಾಗೂ ಬಡ ಕುಟುಂಬಗಳ ಹಿತಾಸಕ್ತಿ ಕಾಪಾಡಲು ರಾಜ್ಯ ಸರ್ಕಾರ ಬದ್ಧವಾಗಿದೆ. ಯಾವುದೇ ಕಾರಣಕ್ಕೂ ರೈತರನ್ನು ಸಂಕಷ್ಟದಲ್ಲಿ ಉಳಿಯಲು ಬಿಡುವುದಿಲ್ಲ. ಬೆಳೆ ಹಾನಿಯಿಂದ ಉಂಟಾಗಿರುವ ನಷ್ಟಕ್ಕೆ ಸೂಕ್ತ ಪರಿಹಾರ ಒದಗಿಸುವಂತೆ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು.

ಗುರುವಾರ ಜಿಲ್ಲೆಯ ಸಿಂಧನೂರು ತಾಲೂಕಿನ ಕಲಮಂಗಿ ಗ್ರಾಮದಲ್ಲಿ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿಯನ್ನು ಖುದ್ದಾಗಿ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆಯ ಕೊರತೆಯಿಂದ ರಾಜ್ಯದ ವಿವಿಧ ಭಾಗಗಳಲ್ಲಿ ಕೃಷಿ ಚಟುವಟಿಕೆಗಳಿಗೆ ತೀವ್ರ ಹಿನ್ನಡೆಯಾಗಿದೆ. ಬೆಳೆ ಬೆಳೆಯಲು ಸಾಲ ಮಾಡಿ ಬಂಡವಾಳ ಹೂಡಿರುವ ರೈತರು ನಿರೀಕ್ಷಿತ



ಇಳುವರಿ ದೊರೆಯದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಪರಿಹಾರ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಬರದಿಂದ ರೈತರಿಗೆ ಉಂಟಾಗಿರುವ ನಷ್ಟದ ಪ್ರಮಾಣವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಈಗಾಗಲೇ ಮುಂಗಡ ಪರಿಹಾರ ವಿತರಣೆಗೆ ಮುಂದಾಗಿದೆ. ಬೆಳೆ ಹಾನಿಗೊಳಗಾದ ರೈತರಿಗೆ ಸಾಧ್ಯವಾದಷ್ಟು ಶೀಘ್ರ ಆರ್ಥಿಕ ನೆರವು ತಲುಪಿಸುವುದು ಸರ್ಕಾರದ ಆದ್ಯತೆಯಾಗಿದೆ. ಪರಿಹಾರಕ್ಕಾಗಿ ರೈತರು ಅನಗತ್ಯವಾಗಿ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಬರ ನಿರ್ವಹಣೆಗೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲಗಳ ಕೊರತೆಯಾಗದಂತೆ ಸರ್ಕಾರ ಮುನ್ನೆಚ್ಚರಿಕೆ ವಹಿಸಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ 2ನೇ ಪುಟಕ್ಕೆ

# ಸ್ವಚ್ಛತೆ ಪ್ರತಿಯೊಬ್ಬರ ಜವಾಬ್ದಾರಿ, ನಿತ್ಯದ ಜೀವನದ ಭಾಗವಾಗಲಿ: ಡಾ. ನಂದಿತಾ ಎಂ.ಎನ್.

ರಾಯಚೂರು, ಅ.7: ಸ್ವಚ್ಛತೆ ಎನ್ನುವುದು ಕೇವಲ ಒಂದು ದಿನದ ಅಭಿಯಾನಕ್ಕೆ ಸೀಮಿತವಾಗದೆ ಪ್ರತಿಯೊಬ್ಬರ ನಿತ್ಯದ ಜೀವನದ ಅವಿಭಾಜ್ಯ ಅಂಗವಾಗಬೇಕು. ಸ್ವಚ್ಛ ಹಾಗೂ ಆರೋಗ್ಯಕರ ಪರಿಸರ ನಿರ್ಮಾಣಕ್ಕೆ ಸಾರ್ವಜನಿಕರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಕರೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಷ್ಟ್ರೀಯ ಕಾಯಕಲ್ಪ ಕಾರ್ಯಕ್ರಮದಡಿ ಜಿಲ್ಲೆಯಾದ್ಯಂತ ಹಮ್ಮಿಕೊಂಡಿರುವ ಆರೋಗ್ಯ ಕೇಂದ್ರಗಳಲ್ಲಿ ಸ್ವಚ್ಛತೆಯನ್ನು ಸಾಂಸ್ಥಿಕಗೊಳಿಸುವುದು ಅಭಿಯಾನದ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಸ್ವಚ್ಛತಾ ಕಾರ್ಯದಲ್ಲಿ



ಭಾಗವಹಿಸಿ ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ದೇಶಸೇವೆ, ಸರಳತೆ, ಶಿಸ್ತು ಮತ್ತು ರಾಷ್ಟ್ರ ನಿರ್ಮಾಣದ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸ್ವಚ್ಛತೆಯ ಮಹತ್ವವನ್ನು ಅರಿತು ನಮ್ಮ ಸುತ್ತಮುತ್ತಲಿನ ಪರಿಸರವನ್ನು ಶುಚಿಯಾಗಿಟ್ಟುಕೊಳ್ಳುವ ಜವಾಬ್ದಾರಿಯನ್ನು ನಾವೆಲ್ಲರೂ ನಿರ್ವಹಿಸಬೇಕು. ವಿಶೇಷವಾಗಿ ಆಸ್ಪತ್ರೆಗಳಲ್ಲಿ ಸ್ವಚ್ಛತೆ ಕಾಪಾಡುವುದು ರೋಗಿಗಳ ಆರೋಗ್ಯ ರಕ್ಷಣೆ ಹಾಗೂ ಸೋಂಕು ಹರಡುವುದನ್ನು ತಡೆಗಟ್ಟುವ ದೃಷ್ಟಿಯಿಂದ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳು ಹಾಗೂ ಆರೋಗ್ಯ ಕೇಂದ್ರಗಳಲ್ಲಿ ಸ್ವಚ್ಛತೆಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ. ಆಸ್ಪತ್ರೆಗಳ ಒಳಾಂಗಣ, ಹೊರಾಂಗಣ, ರೋಗಿಗಳ ವಾರ್ಡ್‌ಗಳು, ಕಚೇರಿಗಳು, ಶೌಚಾಲಯಗಳು ಸೇರಿದಂತೆ ವಿವಿಧ ವಿಭಾಗಗಳಲ್ಲಿ ನಿಯಮಿತವಾಗಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗುತ್ತಿದೆ. ಆಸ್ಪತ್ರೆಗಳಲ್ಲಿ ಉತ್ಪತ್ತಿಯಾಗುವ ವೈದ್ಯಕೀಯ ತ್ಯಾಜ್ಯವನ್ನು ನಿಗದಿತ ಬಣ್ಣಗಳ ತ್ಯಾಜ್ಯ ಸಂಗ್ರಹಣಾ ಡಬ್ಬಿಗಳಲ್ಲಿ ಪ್ರತ್ಯೇಕವಾಗಿ 2ನೇ ಪುಟಕ್ಕೆ

# ಜಾತಿಗಣತಿ ವರದಿ ಬಹಿರಂಗಪಡಿಸಿ ಶಿಫಾರಸು ಜಾರಿಗೊಳಿಸಲು ಹಿಂದುಳಿದ ಜಾತಿಗಳ ಒಕ್ಕೂಟ ಆಗ್ರಹ

ರಾಯಚೂರು: ರಾಜ್ಯದ ಹಿಂದುಳಿದ ಹಾಗೂ ಶೋಷಿತ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಗಳನ್ನು ಗುರುತಿಸುವ ಉದ್ದೇಶದಿಂದ ನಡೆಸಲಾದ ಜಾತಿಗಣತಿ ಸಮೀಕ್ಷೆಯ ವರದಿಯನ್ನು ರಾಜ್ಯ ಸರ್ಕಾರ ಕೂಡಲೇ ಸಾರ್ವಜನಿಕಗೊಳಿಸಿ, ಅದರಲ್ಲಿರುವ ಶಿಫಾರಸುಗಳನ್ನು ಅನುಷ್ಠಾನಕ್ಕೆ ತರಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ರಾಯಚೂರು ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಕೆ. ಹನುಮಂತಪ್ಪ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಅಗತ್ಯವಾದ ಯೋಜನೆಗಳನ್ನು ರೂಪಿಸಲು ನಿಖರವಾದ ಅಂಕಿಅಂಶಗಳು ಅತ್ಯಂತ ಮುಖ್ಯವಾಗಿವೆ. ಆದರೆ ಕಳೆದ ಹಲವು ವರ್ಷಗಳಿಂದ ವಿವಿಧ ಆಯೋಗಗಳ ಮೂಲಕ ಸಮೀಕ್ಷೆಗಳನ್ನು ನಡೆಸಿ ವರದಿಗಳನ್ನು ಸಿದ್ಧಪಡಿಸಿದ್ದರೂ



ಅವುಗಳ ಶಿಫಾರಸುಗಳನ್ನು ಜಾರಿಗೊಳಿಸುವಲ್ಲಿ ಸರ್ಕಾರಗಳು ವಿಫಲವಾಗಿವೆ ಎಂದು ಆರೋಪಿಸಿದರು.

2014ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದ ಎಲ್ಲ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಗತಿಗಳ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಲು ಕಾಂತರಾಜ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗಕ್ಕೆ ಜವಾಬ್ದಾರಿ ವಹಿಸಿತ್ತು. ಸುಮಾರು 5.60 ಕೋಟಿ ಜನರ ಮಾಹಿತಿಯನ್ನು ಸಂಗ್ರಹಿಸುವ ಉದ್ದೇಶದಿಂದ 1.25 ಲಕ್ಷ ಸರ್ಕಾರಿ ಸಿಬ್ಬಂದಿ ಹಾಗೂ 30 ಸಾವಿರ ಮೇಲ್ವಿಚಾರಕರನ್ನು ನಿಯೋಜಿಸಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮೀಕ್ಷೆ ನಡೆಸಲಾಗಿತ್ತು. ಈ ಸಮೀಕ್ಷೆಯ ವರದಿ 2017ರಲ್ಲಿ ಅಂತಿಮಗೊಂಡಿದ್ದರೂ ಅದರ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗಲಿಲ್ಲ ಎಂದು ತಿಳಿಸಿದರು.

ನಂತರ ಅಧಿಕಾರಕ್ಕೆ ಬಂದ ಎಚ್.ಡಿ. ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರ ಹಾಗೂ ಬಿಜೆಪಿ ಸರ್ಕಾರಗಳು ವರದಿಯ ಶಿಫಾರಸುಗಳನ್ನು ಜಾರಿಗೊಳಿಸುವಲ್ಲಿ ಆಸಕ್ತಿ ತೋರಲಿಲ್ಲ. ಇದರಿಂದ ಹಿಂದುಳಿದ ಮತ್ತು ಶೋಷಿತ ಸಮುದಾಯಗಳಿಗೆ ಅನ್ಯಾಯವಾಗಿದೆ ಎಂದು ದೂರಿದರು.

2023ರ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಕಾಂತರಾಜ ಆಯೋಗದ ವರದಿಯನ್ನು ಅಂಗೀಕರಿಸಿ ಶಿಫಾರಸುಗಳನ್ನು ಜಾರಿಗೊಳಿಸುವುದಾಗಿ ಭರವಸೆ ನೀಡಿತ್ತು. ಈ ಭರವಸೆಯನ್ನು 2ನೇ ಪುಟಕ್ಕೆ

# ಕಣ್ಣುಗಳು ಅಮೂಲ್ಯ ಆಸ್ತಿ; ನಿಯಮಿತ ತಪಾಸಣೆ ಅಗತ್ಯ: ಅರವಿಂದ್ ಕುಮಾರ




ಗಾಣದಾಳ್: ಕುರುಡುತನ ತಡೆಗಟ್ಟಲು ವಿಟಮಿನ್‌ಎ ಸಮೃದ್ಧ ಆಹಾರ ಸೇವನೆಗೆ ಆದ್ಯತೆ ನೀಡುವುದರ ಜೊತೆಗೆ ಕಾಲಕಾಲಕ್ಕೆ ನೇತ್ರ ತಪಾಸಣೆ ಮಾಡಿಸಿಕೊಂಡು ವೈದ್ಯರ ಸಲಹೆ ಪಡೆಯಬೇಕು ಎಂದು ಮಟಮಾರಿ ಆರೋಗ್ಯ ಕೇಂದ್ರದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ್ ಕುಮಾರ ಹೇಳಿದರು.

ಗಾಣದಾಳ್ ಆರೋಗ್ಯ ಕೇಂದ್ರ ಹಾಗೂ ಬುಳ್ಳಾಪುರ ಉಪಕೇಂದ್ರದ ವತಿಯಿಂದ ಚಿಕ್ಕಮಂಚಾಲಿ ಗ್ರಾಮದಲ್ಲಿ ಅ.8ರಂದು ಆಯೋಜಿಸಿದ್ದ ವಿಶ್ವ ದೃಷ್ಟಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿಮ್ಮ ಕಣ್ಣುಗಳನ್ನು ಪ್ರೀತಿಸಿ ಎಂಬ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಚರಿಸಲಾಯಿತು. ಕುರುಡುತನ, ದೃಷ್ಟಿದೋಷಗಳು ಹಾಗೂ ಕಣ್ಣಿನ ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಮತ್ತು ಅಗತ್ಯ ನೇತ್ರ ಚಿಕಿತ್ಸೆಯನ್ನು ಎಲ್ಲರಿಗೂ ಸುಲಭವಾಗಿ ತಲುಪಿಸುವುದು ವಿಶ್ವ ದೃಷ್ಟಿ ದಿನದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ವಯಸ್ಸು ಹೆಚ್ಚಾದಂತೆ ಕಣ್ಣಿನ ಪೊರೆ, ವಕ್ರೀಭವನ ದೋಷ, ಗ್ಲುಕೋಮಾ, ಮಧುಮೇಹ ಸಂಬಂಧಿತ ರೆಟಿನೋಪತಿ, ಕಣ್ಣು ಒಣಗುವುದು, ಕಣ್ಣಿನ ಸೋಂಕು ಹಾಗೂ ಡಿಜಿಟಲ್ ಪರದೆಗಳ ಅತಿಯಾದ ಬಳಕೆಯಿಂದ ಉಂಟಾಗುವ ಒತ್ತಡ ಸೇರಿದಂತೆ ಹಲವು ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಇವುಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಿ ಸೂಕ್ತ ಚಿಕಿತ್ಸೆ ಪಡೆದರೆ ಗಂಭೀರ ದೃಷ್ಟಿ ಸಮಸ್ಯೆಯನ್ನು ತಪ್ಪಿಸಬಹುದು ಎಂದು ಹೇಳಿದರು.

ಹಠಾತ್ ದೃಷ್ಟಿ ಕಡಿಮೆಯಾಗುವುದು ಅಥವಾ ದೃಷ್ಟಿ ನಷ್ಟವಾಗುವುದು, ತೀವ್ರ ಕಣ್ಣಿನ ನೋವು, ಕಣ್ಣೆದುರು ಬೆಳಕಿನ ಹೊಳಪು ಅಥವಾ ಕಪ್ಪು ನೆರಳು ಕಾಣಿಸಿಕೊಳ್ಳುವುದು, ಕಣ್ಣಿಗೆ ಗಾಯವಾಗುವುದು, ರಾಸಾಯನಿಕ ವಸ್ತು ತಗುಲುವುದು, ತೀವ್ರ ಕೆಂಪಾಗುವಿಕೆ, ತಲೆನೋವು, ವಾಕರಿಕೆ ಅಥವಾ ವಾಂತಿಯೊಂದಿಗೆ ದೃಷ್ಟಿ ಮಂದವಾಗುವುದು ಮುಂತಾದ ಲಕ್ಷಣಗಳು ಕಂಡುಬಂದಲ್ಲಿ ವಿಳಂಬ ಮಾಡದೆ ನೇತ್ರ ತಜ್ಞರನ್ನು ಸಂಪರ್ಕಿಸಬೇಕು ಎಂದು ಸಲಹೆ ನೀಡಿದರು.

ಪಿಎಚ್‌ಸಿಒ ಉಷಾರಾಣಿ ಮಾತನಾಡಿ, ಉತ್ತಮ ದೃಷ್ಟಿ ಕೇವಲ ಓದುವ ಸಾಮರ್ಥ್ಯಕ್ಕೆ ಸೀಮಿತವಲ್ಲ. ಮಕ್ಕಳ ಕಲಿಕೆ, ವ್ಯಕ್ತಿಯ ಚಲನಶೀಲತೆ, ಉತ್ಪಾದಕತೆ, ಸ್ವಾವಲಂಬನೆ ಹಾಗೂ ಸಾಮಾಜಿಕ ಸಂಪರ್ಕಗಳ ಮೇಲೂ ಕಣ್ಣಿನ ಆರೋಗ್ಯ ನೇರ ಪರಿಣಾಮ ಬೀರುತ್ತದೆ ಎಂದರು.

ಮಕ್ಕಳಲ್ಲಿ ಓದಿನಲ್ಲಿ ಹಿಂದುಳಿಯುವುದು, ದಿನನಿತ್ಯದ ಚಟುವಟಿಕೆಗಳಲ್ಲಿ ಆಸಕ್ತಿ ಕಡಿಮೆಯಾಗುವುದು ಅಥವಾ ದೃಷ್ಟಿ ಸಂಬಂಧಿತ ತೊಂದರೆಗಳ ಲಕ್ಷಣಗಳು ಕಂಡುಬಂದರೆ ಪೋಷಕರು ತಕ್ಷಣ ನೇತ್ರ ತಪಾಸಣೆ ಮಾಡಿಸಬೇಕು. ಕಣ್ಣಿನ ಆರೋಗ್ಯದ ಕುರಿತು ಅರಿವು ಬಾಲ್ಯದಿಂದಲೇ ಆರಂಭವಾಗಿ ಜೀವನಪೂರ್ತಿ ಮುಂದುವರಿಯಬೇಕು ಎಂದು ಹೇಳಿದರು.

ಕಾರ್ಯಕ್ರಮವನ್ನು ಆಶಾ ಕಾರ್ಯಕರ್ತೆ ಅನಿತಾ ನಿರೂಪಿಸಿ ವಂದಿಸಿದರು.

ಸಂಪರ್ಕಿಸಿ
ನಿಮ ವಿಶ್ವಾಸ ಅರ್ಹ ಪತ್ರಿಕೆಯ
ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
98863 85685 tungabimba@gmail.com

ಅಮೃತ ವಾಣಿ
ದೇಹವು ಬಾಡಿಗೆ ಮನೆ ಆತ್ಮವು ಸ್ವಂತ ಮನೆ.

1610 ನೆಯ ದಿನಕ್ಕೆ
ಏಮ್ಸ್
ಹೋರಾಟ

# ಯುವ ಸಂಸತ್ತು ಮೂಲಕ ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ಪ್ರಾಯೋಗಿಕ ಪಾಠ



ಮಾನ್ವಿ: ಯುವಜನರಲ್ಲಿ ಪ್ರಜಾಪ್ರಭುತ್ವದ ಮಹತ್ವ, ವಿಧಾನಸಭೆಯ ಕಾರ್ಯವೈಖರಿ ಹಾಗೂ ಸಂಸದೀಯ ಪ್ರಕ್ರಿಯೆಗಳ ಕುರಿತು ಪ್ರಾಯೋಗಿಕ ಅರಿವು ಮೂಡಿಸುವುದೇ ಯುವ ಸಂಸತ್ತು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಉಪತಹಸೀಲ್ದಾರ್ ಅಬ್ದುಲ್ ವಾಹಿದ್ ಹೇಳಿದರು.

ಪಟ್ಟಣದ ಬಿ.ವಿ.ಆರ್. ಶಾಲೆಯಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ತಾಲೂಕು ಮಟ್ಟದ ಯುವ ಸಂಸತ್ತು ಸಭೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳ ಪಾತ್ರ, ಜನಪ್ರತಿನಿಧಿಗಳ ಜವಾಬ್ದಾರಿ, ವಿಧಾನಸಭೆಯ ಚರ್ಚೆಗಳು ಹಾಗೂ ಪ್ರಶ್ನೋತ್ತರ ಪ್ರಕ್ರಿಯೆಗಳ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳುವುದು ಅಗತ್ಯ ಎಂದರು.

ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಸಂಸದೀಯ ವ್ಯವಸ್ಥೆಯನ್ನು ಕೇವಲ ಪಾಠಪುಸ್ತಕದ ಮಟ್ಟದಲ್ಲೇ ಅಲ್ಲದೆ, ಪ್ರಾಯೋಗಿಕವಾಗಿ ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತವೆ. ಜೊತೆಗೆ ನಾಯಕತ್ವ, ಆತ್ಮವಿಶ್ವಾಸ, ವಿಚಾರ ಮಂಡನೆ ಹಾಗೂ ಸಾರ್ವಜನಿಕ ಸಮಸ್ಯೆಗಳ ಕುರಿತು ಜವಾಬ್ದಾರಿಯುತವಾಗಿ ಚಿಂತಿಸುವ ಗುಣಗಳನ್ನು ಬೆಳೆಸುತ್ತವೆ ಎಂದು ಹೇಳಿದರು.

ತಾಲೂಕು ಸಮಾಜ ಕಲ್ಯಾಣಾಧಿಕಾರಿ ಸಾಹಿರಾಬಾನು ನದಾಫ್ ಮಾತನಾಡಿ, ಸಂಸದೀಯ ಮಾದರಿ ವ್ಯವಸ್ಥೆಯ ಕಾರ್ಯವಿಧಾನ, ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳ ಜವಾಬ್ದಾರಿಗಳು, ವಿಧಾನಸಭೆಯಲ್ಲಿ ಪ್ರಶ್ನೆಗಳನ್ನು ಕೇಳುವ ವಿಧಾನ ಹಾಗೂ ಶೂನ್ಯ ವೇಳೆಯಲ್ಲಿ ವಿಷಯಗಳನ್ನು ಪ್ರಸ್ತಾಪಿಸುವ ಪ್ರಕ್ರಿಯೆಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ವಿದ್ಯಾರ್ಥಿಗಳು ನೈಜ ವಿಧಾನಸಭೆ ಕಲಾಪವನ್ನು ಹೋಲುವಂತೆ ಅಣಕು ಅಧಿವೇಶನ ನಡೆಸಿದರು. ಮುಖ್ಯಮಂತ್ರಿ, ಸಚಿವರು, ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷದ ಸದಸ್ಯರ ಪಾತ್ರ ವಹಿಸಿದ ವಿದ್ಯಾರ್ಥಿಗಳು ಪ್ರಶ್ನೋತ್ತರ, ಚರ್ಚೆ, ಪ್ರತಿಕ್ರಿಯೆ ಮತ್ತು ವಿಷಯ ಮಂಡನೆಯ ಮೂಲಕ ಕಲಾಪವನ್ನು ಜೀವಂತಗೊಳಿಸಿದರು.

ಲೋಯೋಲಾ ಕಾಲೇಜಿನ ವಿದ್ಯಾರ್ಥಿ ರಾಹುಲ್ ಮುಖ್ಯಮಂತ್ರಿ ಪಾತ್ರ ನಿರ್ವಹಿಸಿ, ವಿರೋಧ ಪಕ್ಷದ ಸದಸ್ಯರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ ಆಡಳಿತ ಪಕ್ಷದ ಜವಾಬ್ದಾರಿಯನ್ನು ಪ್ರಾಯೋಗಿಕವಾಗಿ ಅರ್ಥಮಾಡಿಕೊಳ್ಳಲು ಅವಕಾಶ ದೊರೆಯಿತು. ಈ ಅನುಭವ ನಾಯಕತ್ವ ಗುಣ ಬೆಳೆಸಲು ಸಹಕಾರಿಯಾಯಿತು ಎಂದು ಅಭಿಪ್ರಾಯಪಟ್ಟರು.

ಬಾಷುಮಿಯಾ ಸಾಹುಕಾರ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿ ರಾಗಿಣಿ ಸಭಾಪತಿ ಪಾತ್ರ ನಿರ್ವಹಿಸಿ, ಸಭೆಯನ್ನು ನಿಯಮಬದ್ಧವಾಗಿ ಮುನ್ನಡೆಸುವುದು, ಸದಸ್ಯರಿಗೆ ಮಾತನಾಡಲು ಅವಕಾಶ ಕಲ್ಪಿಸುವುದು ಹಾಗೂ ಕಲಾಪದಲ್ಲಿ ಶಿಸ್ತು ಕಾಪಾಡುವ ವಿಧಾನವನ್ನು ಕಲಿಯಲು ಸಾಧ್ಯವಾಯಿತು ಎಂದು ತಿಳಿಸಿದರು.

ಗಣೇಶ ಮಹ್ಮದಿ, ಲೋಯೋಲಾ ಕಾಲೇಜಿನ ವರುಣ್ ಸೇರಿದಂತೆ ಹಲವು ವಿದ್ಯಾರ್ಥಿಗಳು ಯುವ ಸಂಸತ್ತು ಕಾರ್ಯಕ್ರಮದ ಅನುಭವ ಹಂಚಿಕೊಂಡರು.

ತಾಲೂಕು ಆಡಳಿತ, ತಾಲೂಕು ಪಂಚಾಯತ್, ಮಾನ್ವಿ ಪುರಸಭೆ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ತಾಲೂಕಿನ ವಿವಿಧ ಸರ್ಕಾರಿ ಪ್ರೌಢಶಾಲೆಗಳು, ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳ ವಿದ್ಯಾರ್ಥಿಗಳು ಪಾಲ್ಗೊಂಡು, ಸಾರ್ವಜನಿಕ ಸಮಸ್ಯೆಗಳನ್ನು ಗುರುತಿಸುವುದು, ಅವುಗಳನ್ನು ಸದನದಲ್ಲಿ ಪ್ರಸ್ತಾಪಿಸುವುದು, ಪ್ರಶ್ನಿಸುವುದು, ಉತ್ತರಿಸುವುದು ಹಾಗೂ ಭಿನ್ನಾಭಿಪ್ರಾಯಗಳ ನಡುವೆಯೂ ಪ್ರಜಾಪ್ರಭುತ್ವದ ನಿಯಮಗಳನ್ನು ಗೌರವಿಸುವ ವಿಧಾನವನ್ನು ಪ್ರಾಯೋಗಿಕವಾಗಿ ಅರಿತುಕೊಂಡರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಕುಬೇರಪ್ಪ, ಮಾನ್ವಿ ಪುರಸಭೆಯ ಕಿರಿಯ ಆರೋಗ್ಯ ನಿರೀಕ್ಷಕ ಮಹೇಶ್ ಕುಮಾರ, ವಕೀಲರಾದ ಅಮೃತ ಮತ್ತು ಶ್ರೀದೇವಿ ಬಳಿಗಾ್ರ, ಸಮಾಜ ಕಲ್ಯಾಣ ಇಲಾಖೆಯ ರಾಜಶೇಖ್ರ, ರಾಮಲಿಂಗಪ್ಪ ನಾಯಕ ಕೆ., ವಿಜಯ್, ಸುರೇಖಾ, ಮಹಿಬೂಬ್, ಇರ್ಫಾನ್, ಉಪನ್ಯಾಸಕರಾದ ಬಸವರಾಜ್ ಕಡದೊಡ್ಡಿ, ಡಾ. ಹುಲಿಯಪ್ಪ, ಡಾ. ಬಸವರಾಜ್ ಕರಡಿಗುಡ್ಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸ್ವಚ್ಛತೆ ಪ್ರತಿಯೊಬ್ಬರ ಜವಾಬ್ದಾರಿ, ನಿತ್ಯದ ಜೀವನದ ಭಾಗವಾಗಲಿ: ಡಾ. ನಂದಿತಾ ಎಂ.ಎನ್.

ವಿಂಗಡಿಸಿ, ಸುರಕ್ಷಿತ ವಿಧಾನದಲ್ಲಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ವಿವರಿಸಿದರು.

ಆಸ್ಪತ್ರೆಗಳಿಗೆ ಆಗಮಿಸುವ ರೋಗಿಗಳು ಹಾಗೂ ಅವರ ಸಂಬಂಧಿಕರು ಸ್ವಚ್ಛತೆ ಕಾಪಾಡುವಲ್ಲಿ ಸಹಕರಿಸಬೇಕು. ಆಹಾರ ಪದಾರ್ಥಗಳ ಉಳಿಕೆ, ಹಸಿ ಕಸ ಹಾಗೂ ಒಣ ಕಸವನ್ನು ಪ್ರತ್ಯೇಕವಾಗಿ ನಿಗದಿತ ಸ್ಥಳಗಳಲ್ಲಿ ಹಾಕುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಆಸ್ಪತ್ರೆ ಆವರಣದಲ್ಲಿ ಅನಗತ್ಯ ವಸ್ತುಗಳನ್ನು ತೆರವುಗೊಳಿಸುವುದು, ನೀರು ನಿಲ್ಲುವ ಸ್ಥಳಗಳನ್ನು ಗುರುತಿಸಿ ಸ್ವಚ್ಛಗೊಳಿಸುವುದು ಹಾಗೂ ಸೊಳ್ಳೆಗಳ ಉತ್ಪತ್ತಿಗೆ ಅವಕಾಶವಾಗದಂತೆ ಮುನ್ನೆಚ್ಚರಿಕೆ ವಹಿಸುವ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಆರೋಗ್ಯ ಕೇಂದ್ರಗಳಲ್ಲಿ ಸ್ವಚ್ಛತಾ ಕಾರ್ಯಗಳನ್ನು ನಡೆಸುವುದರ ಜೊತೆಗೆ ಅವುಗಳ ನಿರ್ವಹಣೆ ಮತ್ತು ಮೇಲ್ವಿಚಾರಣೆಗೆ ಸಂಬಂಧಿಸಿದ ದಾಖಲಾತಿಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲಾಗುತ್ತಿದೆ. ಸ್ವಚ್ಛತಾ ಚಟುವಟಿಕೆಗಳಿಗೆ ನಿರಂತರತೆ ನೀಡುವ ಉದ್ದೇಶದಿಂದ ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ವಿಶೇಷ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸ್ವಚ್ಛ ಆಸ್ಪತ್ರೆ ಹಾಗೂ ಆರೋಗ್ಯಕರ ಪರಿಸರ ನಿರ್ಮಾಣ ಕೇವಲ ಆರೋಗ್ಯ ಇಲಾಖೆಯ ಜವಾಬ್ದಾರಿಯಲ್ಲ. ಸಾರ್ವಜನಿಕರ ಸಹಭಾಗಿತ್ವವೂ ಅತ್ಯಂತ ಮುಖ್ಯವಾಗಿದೆ. ಪ್ರತಿಯೊಬ್ಬರೂ ತಮ್ಮ ಮನೆ, ಕೆಲಸದ ಸ್ಥಳ ಹಾಗೂ ಸಾರ್ವಜನಿಕ ಪ್ರದೇಶಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿದಾಗ ಮಾತ್ರ ಸ್ವಚ್ಛ ಮತ್ತು ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ ಎಂದು ಡಾ. ನಂದಿತಾ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಗಣೇಶ ಕೆ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ಶಿವಕುಮಾರ ನಾರಾ, ಜಿಲ್ಲಾ ಎನ್‌ವಿಬಿಡಿಸಿಪಿ ಅಧಿಕಾರಿ ಡಾ. ಚಂದ್ರಶೇಖರಯ್ಯ, ಬಾಯಿ ಆರೋಗ್ಯ ನೋಡಲ್ ಅಧಿಕಾರಿ ಡಾ. ಶೀತಲ್, ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಎಚ್. ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಪುಂಡಲೀಕ ಗಂಜಿ, ಕಚೇರಿ ಅಧೀಕ್ಷಕರಾದ ಸುಹಾಸ್, ಸುಧಾರಾಣಿ, ಎನ್‌ಕ್ಯೂಎಎಸ್ ಜಿಲ್ಲಾ ಸಲಹೆಗಾರ ಹರೀಶ್ ಪತಂಗೆ ಸೇರಿದಂತೆ ವಿವಿಧ ವಿಭಾಗಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿ ಶ್ರಮದಾನ ಮಾಡಿದರು.

# ಜಾತಿಗಣತಿ ವರದಿ ಬಹಿರಂಗಪಡಿಸಿ ಶಿಫಾರಸು ಜಾರಿಗೊಳಿಸಲು ಹಿಂದುಳಿದ ಜಾತಿಗಳ ಒಕ್ಕೂಟ ಆಗ್ರಹ

ನಂಬಿ ಅಹಿಂದ ಸಮುದಾಯಗಳು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದ್ದವು. ಆದರೆ ಸರ್ಕಾರ ರಚನೆಯಾದ ನಂತರವೂ ವರದಿಯ ಅನುಷ್ಠಾನ ವಿಳಂಬವಾಗಿರುವುದು ನಿರಾಸೆ ಮೂಡಿಸಿದೆ ಎಂದು ಹೇಳಿದರು.

ಜಯಪ್ರಕಾಶ್ ಹೆಗ್ಡೆ ನೇತೃತ್ವದ ಆಯೋಗವು ಹಿಂದಿನ ಸಮೀಕ್ಷೆಯ ದತ್ತಾಂಶಗಳನ್ನು ಒಳಗೊಂಡ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ಬಳಿಕ ಕೆಲವು ಪ್ರಬಲ ಸಮುದಾಯಗಳು ಸಮೀಕ್ಷೆಯ ವೈಜ್ಞಾನಿಕತೆ ಹಾಗೂ ಮಾಹಿತಿ ಸಂಗ್ರಹಣೆಯ ವಿಧಾನಗಳ ಕುರಿತು ಆಕ್ಷೇಪ ವ್ಯಕ್ತಪಡಿಸಿದ್ದವು. ಮನೆಮನೆಗೆ ಭೇಟಿ ನೀಡದೆ ಸಮೀಕ್ಷೆ ನಡೆಸಲಾಗಿದೆ ಎಂಬ ಆರೋಪಗಳನ್ನು ಮುಂದಿಟ್ಟು ವರದಿಯನ್ನು ತಿರಸ್ಕರಿಸುವಂತೆ ಸರ್ಕಾರದ ಮೇಲೆ ಒತ್ತಡ ಹೇರಲಾಗಿತ್ತು. ಈ ಒತ್ತಡಕ್ಕೆ ಮಣಿದು ಸರ್ಕಾರ ವರದಿಯನ್ನು ಕೈಬಿಟ್ಟಿದೆ ಎಂದು ಹನುಮಂತಪ್ಪ ಆರೋಪಿಸಿದರು.

ಹಿಂದಿನ ಸಮೀಕ್ಷೆಯ ದತ್ತಾಂಶ ಹಳೆಯದಾಗಿದೆ ಎಂಬ ಕಾರಣ ನೀಡಿ ಮತ್ತೊಮ್ಮೆ ಸಮೀಕ್ಷೆ ನಡೆಸಲು ಸರ್ಕಾರ ಮುಂದಾಯಿತು. ಮಧುಸೂದನ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗದ ಮೂಲಕ ಹೊಸದಾಗಿ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷೆ ಕೈಗೊಳ್ಳಲಾಗಿದ್ದು, ಇದಕ್ಕಾಗಿ ಸುಮಾರು 435 ಕೋಟಿ ರೂ. ವೆಚ್ಚ ಮಾಡಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರ ತೆರಿಗೆ ಹಣವನ್ನು ದೊಡ್ಡ ಪ್ರಮಾಣದಲ್ಲಿ ಖರ್ಚು ಮಾಡಿ ಸಿದ್ಧಪಡಿಸಿರುವ ಸಮೀಕ್ಷಾ ವರದಿಯ ಬಗ್ಗೆ ಸರ್ಕಾರ ಸ್ಪಷ್ಟ ನಿಲುವು ಪ್ರಕಟಿಸದಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಸಮೀಕ್ಷೆಯ ಉದ್ದೇಶವೇ ಹಿಂದುಳಿದ ಸಮುದಾಯಗಳ ನೈಜ ಸ್ಥಿತಿಗತಿಗಳನ್ನು ಗುರುತಿಸಿ ಅವರಿಗೆ ನ್ಯಾಯಯುತ ಸೌಲಭ್ಯಗಳನ್ನು ಒದಗಿಸುವುದಾಗಿದೆ. ಆದರೆ ವರದಿಯ ಮಾಹಿತಿಯನ್ನು ಬಹಿರಂಗಪಡಿಸದೆ ಗೌಪ್ಯವಾಗಿಡುವುದು ಸಾಮಾಜಿಕ ನ್ಯಾಯದ ಆಶಯಕ್ಕೆ ವಿರುದ್ಧವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದ ಹಿಂದುಳಿದ ಸಮುದಾಯಗಳು ಶಿಕ್ಷಣ, ಉದ್ಯೋಗ, ಆರ್ಥಿಕ ಅವಕಾಶಗಳು ಹಾಗೂ ಸಾಮಾಜಿಕ ಪ್ರಾತಿನಿಧ್ಯದ ವಿಚಾರದಲ್ಲಿ ಇಂದಿಗೂ ಹಲವು ಸಮಸ್ಯೆಗಳನ್ನು ಎದುರಿಸುತ್ತಿವೆ. ಇಂತಹ ಸಮುದಾಯಗಳ ಅಭಿವೃದ್ಧಿಗೆ ಸಮರ್ಪಕ ಯೋಜನೆಗಳನ್ನು ರೂಪಿಸಲು ಸಮೀಕ್ಷೆಯ ದತ್ತಾಂಶಗಳು ನೆರವಾಗಲಿವೆ. ಆದ್ದರಿಂದ ಸರ್ಕಾರ ಯಾವುದೇ ಸಮುದಾಯದ ಒತ್ತಡಕ್ಕೆ ಒಳಗಾಗದೆ ವರದಿಯ ಅಂಶಗಳನ್ನು ಸಾರ್ವಜನಿಕ ಚರ್ಚೆಗೆ ಮುಕ್ತಗೊಳಿಸಬೇಕು ಎಂದು ಒತ್ತಾಯಿಸಿದರು.

ಜಾತಿಗಣತಿ ವಿಚಾರವನ್ನು ರಾಜಕೀಯ ಲಾಭನಷ್ಟದ ದೃಷ್ಟಿಯಿಂದ ನೋಡದೆ ಸಾಮಾಜಿಕ ನ್ಯಾಯದ ದೃಷ್ಟಿಕೋನದಿಂದ ಪರಿಗಣಿಸಬೇಕು. ಸಮೀಕ್ಷೆಗಾಗಿ ಕೋಟ್ಯಂತರ ರೂಪಾಯಿ ವೆಚ್ಚ ಮಾಡಿರುವ ಸರ್ಕಾರ ಅದರ ಫಲಿತಾಂಶವನ್ನು ಜನತೆಗೆ ತಿಳಿಸುವ ಜವಾಬ್ದಾರಿಯಿಂದ ಹಿಂದೆ ಸರಿಯಬಾರದು. ವರದಿಯಲ್ಲಿರುವ ಶಿಫಾರಸುಗಳನ್ನು ಪರಿಶೀಲಿಸಿ ಅನುಷ್ಠಾನಕ್ಕೆ ಕಾಲಮಿತಿ ನಿಗದಿಪಡಿಸಬೇಕು ಎಂದು ಆಗ್ರಹಿಸಿದರು.

ರಾಜ್ಯ ಸರ್ಕಾರ ಕೂಡಲೇ ಸಮೀಕ್ಷಾ ವರದಿಯ ದತ್ತಾಂಶಗಳನ್ನು ಬಹಿರಂಗಪಡಿಸಿ ಹಿಂದುಳಿದ ಹಾಗೂ ಶೋಷಿತ ಸಮುದಾಯಗಳ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ವಿವಿಧ ಹಿಂದುಳಿದ ಜಾತಿಗಳ ಸಂಘಟನೆಗಳನ್ನು ಒಗ್ಗೂಡಿಸಿ ಮುಂದಿನ ದಿನಗಳಲ್ಲಿ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಅವರಿಗೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಕಾರ್ಯಾಧ್ಯಕ್ಷ ಹನುಮಂತಪ್ಪ ಜಾಲಿಬೆಂಚಿ, ನಾರಾಯಣ, ವೆಂಕಟೇಶ ಮಡಿವಾಳ, ಆಂಜನೇಯ, ಬಿ ಬಸವರಾಜ್, ಗಾಯತ್ರಿ, ಸುರೇಖಾ, ಅಂಜಲಿ, ನರಸಿಂಹ, ವಿಜಯ್ ಭಾಸ್ಕರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಬರದಿಂದ ನಲುಗಿದ ರೈತರ ನೆರವಿಗೆ ಸರ್ಕಾರ ಬದ್ಧ: ಡಾ. ಜಿ. ಪರಮೇಶ್ವರ

ಒಳಗಾಗಿರುವ ರೈತರಿಗೆ ನೆರವಾಗುವ ಉದ್ದೇಶದಿಂದ ರಾಜ್ಯ ಸರ್ಕಾರ ₹1,250 ಕೋಟಿ ಅನುದಾನ ಘೋಷಿಸಿದ್ದು, ಪ್ರತಿ ರೈತನಿಗೆ ₹2,500ರಂತೆ ಪರಿಹಾರ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ಪರಿಹಾರ ಮಾರ್ಗಸೂಚಿಗಳ ಜೊತೆಗೆ ರಾಜ್ಯ ಸರ್ಕಾರವೂ ತನ್ನ ಸಂಪನ್ಮೂಲಗಳಿಂದ ರೈತರ ನೆರವಿಗೆ ಮುಂದಾಗಿದೆ ಎಂದು ತಿಳಿಸಿದರು.

ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಕ್ರಮ ಕೈಗೊಳ್ಳಲು ಈಗಾಗಲೇ ₹306 ಕೋಟಿ ಬಿಡುಗಡೆ ಮಾಡಲಾಗಿದೆ. ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮೇವು ಬ್ಯಾಂಕ್‌ಗಳ ನಿರ್ವಹಣೆ ಹಾಗೂ ಮೇವಿನ ಕಿಟ್‌ಗಳ ಪೂರೈಕೆಗಾಗಿ ₹25 ಕೋಟಿ ಅನುದಾನ ಒದಗಿಸಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಮತ್ತು ಜಾನುವಾರುಗಳ ಮೇವಿನ ಲಭ್ಯತೆಗೆ ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ಆರು ಗಂಟೆಗಳ ಕಾಲ ವಿದ್ಯುತ್ ಪೂರೈಕೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ವಿದ್ಯುತ್ ಸರಬರಾಜಿನಲ್ಲಿ ತಾಂತ್ರಿಕ ಸಮಸ್ಯೆಗಳು ಕಂಡುಬಂದಲ್ಲಿ ತಕ್ಷಣ ಸರಿಪಡಿಸಬೇಕು. ನೀರಾವರಿ ಸೌಲಭ್ಯ ಹೊಂದಿರುವ ರೈತರಿಗೆ ವಿದ್ಯುತ್ ವ್ಯತ್ಯಯದಿಂದ ಮತ್ತಷ್ಟು ಬೆಳೆ ಹಾನಿಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಅದೇ ರೀತಿ, ವಿಜಿರಾಮ್‌ಜಿ ಯೋಜನೆಯಡಿ ಕೆಲಸ ನಿರ್ವಹಿಸಿರುವ ಕೂಲಿ ಕಾರ್ಮಿಕರಿಗೆ ಬಾಕಿ ಇರುವ ಕೂಲಿ ಹಣವನ್ನು ಒಂದು ವಾರದೊಳಗೆ ಪಾವತಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದರು. ಬರ ಪರಿಸ್ಥಿತಿಯಲ್ಲಿ ಕೃಷಿ ಕೂಲಿ ಕಾರ್ಮಿಕರ ಜೀವನೋಪಾಯಕ್ಕೂ ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

ಬೆಳೆ ಹಾನಿ ಪರಿಶೀಲನೆ ಸಂದರ್ಭದಲ್ಲಿ ಉಮಲೂಟಿ ಗ್ರಾಮದ ರೈತ ಹನುಮಪ್ಪ ತಮ್ಮ ಅಳಲು ತೋಡಿಕೊಂಡು, ಉತ್ತಮ ಇಳುವರಿಯ ನಿರೀಕ್ಷೆಯಲ್ಲಿ ನಾಲ್ಕು ಕ್ವಿಂಟಲ್ ತೊಗರಿ ಬಿತ್ತನೆ ಮಾಡಲಾಗಿತ್ತು. ಆದರೆ ಸಕಾಲದಲ್ಲಿ ಮಳೆಯಾಗದ ಪರಿಣಾಮ ಬೆಳೆ ಸಂಪೂರ್ಣ ಹಾಳಾಗಿದೆ. ಬಿತ್ತನೆ ಬೀಜ, ಗೊಬ್ಬರ ಹಾಗೂ ಕೃಷಿ ಚಟುವಟಿಕೆಗಳಿಗೆ ಸಾಕಷ್ಟು ಹಣ ಖರ್ಚು ಮಾಡಿದ್ದರೂ ಬೆಳೆ ಕೈಗೆ ಬಾರದಂತಾಗಿದೆ. ಇದರಿಂದ ರೈತ ಕುಟುಂಬಗಳು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿವೆ ಎಂದು ವಿವರಿಸಿದರು.

ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸರ್ಕಾರ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು. ಕೃಷಿಗಾಗಿ ಮಾಡಿರುವ ಸಾಲ ತೀರಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದ್ದು, ರೈತರ ಬದುಕಿಗೆ ಆಸರೆಯಾಗುವಂತಹ ಪರಿಹಾರ ಘೋಷಿಸಬೇಕು ಎಂದು ಮನವಿ ಮಾಡಿದರು.

ರೈತರ ಅಹವಾಲುಗಳನ್ನು ಆಲಿಸಿದ ಡಾ. ಜಿ. ಪರಮೇಶ್ವರ, ಬರ ಪರಿಸ್ಥಿತಿಯಿಂದ ಉಂಟಾಗಿರುವ ಸಮಸ್ಯೆಗಳ ಕುರಿತು ಸರ್ಕಾರಕ್ಕೆ ಅರಿವಿದೆ. ರೈತರು ಹಾಗೂ ಕೃಷಿ ಕಾರ್ಮಿಕರ ಹಿತಾಸಕ್ತಿ ಕಾಪಾಡಲು ಸರ್ಕಾರ ಅಗತ್ಯ ಕ್ರಮಗಳನ್ನು ಮುಂದುವರಿಸಲಿದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಮಸ್ಕಿ ಶಾಸಕ ಆರ್. ಬಸನಗೌಡ ತುರ್ವಿಹಾಳ, ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದ ಕೆ. ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುರ್ಮಾ, ಡಾ. ಹಂಪಣ್ಣ ಸಜ್ಜನ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ತಹಶೀಲ್ದಾರ್ ಅರುಣ್ ಕುಮಾರ್ ದೇಸಾಯಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸ್ಥಳೀಯ ರೈತರು ಉಪಸ್ಥಿತರಿದ್ದರು.

# ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಪ್ರತಿಭಟನೆ

ಸಂವಿಧಾನಾತ್ಮಕ ಸಂಸ್ಥೆಗಳ ಮೇಲಿನ ಸಾರ್ವಜನಿಕ ವಿಶ್ವಾಸಕ್ಕೆ ಧಕ್ಕೆ ತರುತ್ತವೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆ್ರ) ಪ್ರಕ್ರಿಯೆಯಲ್ಲಿಯೂ ಪಾರದರ್ಶಕತೆ ಮತ್ತು ನಿಷ್ಪಕ್ಷಪಾತತೆ ಕಾಪಾಡಲಾಗುತ್ತಿಲ್ಲ ಎಂದು ಆರೋಪಿಸಿದ ಮುಖಂಡರು, ಮತದಾರರ ಹಕ್ಕುಗಳನ್ನು ರಕ್ಷಿಸುವ ಬದಲು ರಾಜಕೀಯ ಹಿತಾಸಕ್ತಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ದೂರಿದರು.

ಚುನಾವಣಾ ಆಯೋಗವು ಯಾವುದೇ ರಾಜಕೀಯ ಪಕ್ಷದ ಪ್ರಭಾವಕ್ಕೆ ಒಳಗಾಗದೆ ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸಬೇಕು. ಮತದಾರರ ಹಕ್ಕುಗಳು ಹಾಗೂ ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಕಾಪಾಡುವ ಜವಾಬ್ದಾರಿ ಆಯೋಗದ ಮೇಲಿದೆ. ಈ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ನೈತಿಕ ಹೊಣೆ ಹೊತ್ತು ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಅವರ ವಿರುದ್ಧ ಕೇಳಿಬಂದಿರುವ ಆರೋಪಗಳ ಕುರಿತು ತನಿಖೆ ನಡೆಸಿ, ಕ್ರಿಮಿನಲ್ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯ ಅಂಗವಾಗಿ ಕಾಂಗ್ರೆಸ್ ಕಾರ್ಯಕರ್ತರು ಕೈಗಳಿಗೆ ಕಪ್ಪುಪಟ್ಟಿ ಕಟ್ಟಿಕೊಂಡು ಗಂಜ್ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿದರು. ಪ್ರಜಾಪ್ರಭುತ್ವ ಮತ್ತು ಸಂವಿಧಾನದ ರಕ್ಷಣೆಗೆ ಪ್ರತಿಯೊಬ್ಬ ನಾಗರಿಕರೂ ಮುಂದಾಗಬೇಕೆಂದು ಕರೆ ನೀಡಿದರು.

ಇದೇ ಹೋರಾಟದ ಮುಂದುವರಿದ ಭಾಗವಾಗಿ ಅಕ್ಟೋಬರ್ 9ರಂದು ಬೆಳಿಗ್ಗೆ 10.30ಕ್ಕೆ ನಗರದ ನೇತಾಜಿ ವೃತ್ತದಿಂದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಈ ಮೆರವಣಿಗೆಯಲ್ಲಿ ಪ್ರಗತಿಪರ ಸಂಘಟನೆಗಳ ಮುಖಂಡರು, ಸಮಾನ ಮನಸ್ಕರು, ಪ್ರಜಾಪ್ರಭುತ್ವದ ಪರ ಕಾಳಜಿ ಹೊಂದಿರುವ ನಾಗರಿಕರು ಹಾಗೂ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ರುದ್ರಪ್ಪ ಅಂಗಡಿ, ಅಮರೇಗಿಡ ಅಂಚಿನಾಳ, ಜಯಣ್ಣ, ಶಾಲಾಮ್, ಶ್ರೀನಿವಾಸ್ ರೆಡ್ಡಿ, ಪ್ರತಿಭಾ ರೆಡ್ಡಿ, ನಿರ್ಮಲ ಬೆಣ್ಣೆ, ಶಶಿಕಲಾ, ಸುರೇಖಾ, ಮರಿಸ್ವಾಮಿ ಸೇರಿದಂತೆ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ರೈತರನ್ನು ಸಂಕಷ್ಟಕ್ಕೆ ಸಿಲುಕಲು ಬಿಡುವುದಿಲ್ಲ, ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ: ಡಾ. ಜಿ. ಪರಮೇಶ್ವರ್

ನೀರಿನ ಸಮಸ್ಯೆ ನಿವಾರಣೆ, ಜಾನುವಾರುಗಳಿಗೆ ಮೇವಿನ ವ್ಯವಸ್ಥೆ ಹಾಗೂ ಅಗತ್ಯ ಕಾಮಗಾರಿಗಳ ನಿರ್ವಹಣೆಗಾಗಿ ಜಿಲ್ಲಾಧಿಕಾರಿಗಳ ಹಂತದಲ್ಲಿ ಸಾಕಷ್ಟು ಅನುದಾನ ಕಾಯ್ದಿರಿಸಲಾಗಿದೆ. ಈ ಉದ್ದೇಶಗಳಿಗಾಗಿ ಸುಮಾರು ₹329 ಕೋಟಿ ಲಭ್ಯವಿದ್ದು, ಜನಸಾಮಾನ್ಯರಿಗೆ ತೊಂದರೆಯಾಗದಂತೆ ಹಣವನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಸೂಚಿಸಲಾಗಿದೆ ಎಂದು ವಿವರಿಸಿದರು.

ಕೇಂದ್ರ ಸರ್ಕಾರದ ಪರಿಹಾರ ಮಾರ್ಗಸೂಚಿಗಳ ಪ್ರಕಾರ ಶೇ.33ಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಬೆಳೆ ಹಾನಿ ಸಂಭವಿಸಿದಲ್ಲಿ ಪ್ರತಿ ಹೆಕ್ಟೇರ್‌ಗೆ ₹8,500 ಪರಿಹಾರ ನೀಡಲು ನಿರ್ಧರಿಸಲಾಗಿದೆ. ಇದರ ಜೊತೆಗೆ ರಾಜ್ಯ ಸರ್ಕಾರವೂ ರೈತರ ನೆರವಿಗೆ ಮುಂದಾಗಿದ್ದು, ಮೊದಲ ಕಂತಿನ ಪರಿಹಾರಕ್ಕಾಗಿ ₹1,250 ಕೋಟಿ ಬಿಡುಗಡೆ ಮಾಡಲಾಗಿದೆ. ರೈತರು ಅನುಭವಿಸಿರುವ ನಷ್ಟಕ್ಕೆ ಅನುಗುಣವಾಗಿ ಕೇಂದ್ರ ಸರ್ಕಾರದಿಂದಲೂ ಹೆಚ್ಚಿನ ನೆರವು ದೊರೆಯಬೇಕೆಂಬ ಉದ್ದೇಶದಿಂದ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಬರ ಪರಿಸ್ಥಿತಿಯಲ್ಲಿ ಕೃಷಿ ಚಟುವಟಿಕೆಗಳನ್ನು ಮುಂದುವರಿಸಲು ವಿದ್ಯುತ್ ಪೂರೈಕೆಯೂ ಅತ್ಯಂತ ಮುಖ್ಯವಾಗಿದೆ. ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಹಾಗೂ ವಿದ್ಯುತ್ ಕಡಿತದಿಂದ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕ್ರಮ ಕೈಗೊಂಡಿದೆ. ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸರಬರಾಜಿನಲ್ಲಿ ಉಂಟಾಗುವ ತೊಂದರೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಯಾವುದೇ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸಿಲ್ಲ. ಜನಸಾಮಾನ್ಯರ ಆರ್ಥಿಕ ಸ್ಥಿತಿಯನ್ನು ಸುಧಾರಿಸುವ ಉದ್ದೇಶದಿಂದ ಜಾರಿಗೆ ತಂದಿರುವ ಯೋಜನೆಗಳು ಮುಂದುವರಿಯಲಿವೆ. ಬರಗಾಲದಂತಹ ಸಂಕಷ್ಟದ ಸಂದರ್ಭದಲ್ಲಿಯೂ ರೈತರು, ಬಡವರು ಹಾಗೂ ಕೂಲಿ ಕಾರ್ಮಿಕರಿಗೆ ಸರ್ಕಾರದ ನೆರವು ದೊರೆಯುವಂತೆ ನೋಡಿಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ಕೃಷಿಯನ್ನೇ ನಂಬಿಕೊಂಡು ಜೀವನ ನಡೆಸುತ್ತಿರುವ ಕುಟುಂಬಗಳಿಗೆ ಬರ ಪರಿಸ್ಥಿತಿ ದೊಡ್ಡ ಸವಾಲಾಗಿ ಪರಿಣಮಿಸಿದೆ. ಇಂತಹ ಸಂದರ್ಭದಲ್ಲಿ ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ಸರ್ಕಾರದ ಪ್ರಮುಖ ಜವಾಬ್ದಾರಿಯಾಗಿದೆ. ಬೆಳೆ ನಷ್ಟ, ಕುಡಿಯುವ ನೀರು, ಜಾನುವಾರುಗಳ ಮೇವು ಹಾಗೂ ವಿದ್ಯುತ್ ಸಮಸ್ಯೆಗಳಿಗೆ ಆದ್ಯತೆಯ ಮೇರೆಗೆ ಪರಿಹಾರ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ರೈತ ಸಮುದಾಯದ ಹಿತಾಸಕ್ತಿ ರಕ್ಷಣೆಗೆ ಸರ್ಕಾರ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಮಸ್ಕಿ ಶಾಸಕ ಆರ್. ಬಸನಗೌಡ ತುರ್ವಿಹಾಳ, ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದ ಕೆ. ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುರ್ಮಾ, ಡಾ. ಹಂಪಣ್ಣ ಸಜ್ಜನ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ತಹಶೀಲ್ದಾರ್ ಅರುಣ್ ಕುಮಾರ್ ದೇಸಾಯಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಕರ್ನಾಟಕ ಧಮ್ಮ ಜನಜಾಗೃತಿ ದೀಕ್ಷಾ ಯಾತ್ರೆಗೆ ಅದ್ದೂರಿ ಸ್ವಾಗತ



ರಾಯಚೂರು, ಅ.8: ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಐತಿಹಾಸಿಕ ಬೌದ್ಧ ಧಮ್ಮ ದೀಕ್ಷೆಯ 70ನೇ ವರ್ಷಾಚರಣೆ ಅಂಗವಾಗಿ ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿರುವ ಕರ್ನಾಟಕ ಧಮ್ಮ ಜನಜಾಗೃತಿ ದೀಕ್ಷಾ ಯಾತ್ರೆಯು ಅಕ್ಟೋಬರ್ 6ರಂದು ಸಂಜೆ ರಾಯಚೂರು ನಗರಕ್ಕೆ ಆಗಮಿಸಿದ್ದು, ಸಿದ್ಧಾರ್ಥ ಬುದ್ಧವಿಹಾರ ಸಮಿತಿ ಹಾಗೂ ಬೌದ್ಧ ಉಪಾಸಕರು ಯಾತ್ರೆಯನ್ನು ಅದ್ದೂರಿಯಾಗಿ ಸ್ವಾಗತಿಸಿದರು.

ಅಂತರಾಷ್ಟ್ರೀಯ ಬೌದ್ಧ ಯುವ ಸಂಘಟನೆ ಹಾಗೂ ಬೌದ್ಧ ಮಹಾಸ್ತೂಪ ಅಭಿವೃದ್ಧಿ ಸಂರಕ್ಷಣಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿರುವ ಈ ಯಾತ್ರೆಯು ನಗರದ ಅಂಬೇಡ್ಕರ್ ವೃತ್ತಕ್ಕೆ ಆಗಮಿಸಿದ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು. ಬಳಿಕ ಬೌದ್ಧ ಉಪಾಸಕರು ತ್ರಿಸರಣ ಪಠಣ ಮಾಡುತ್ತಾ ಯಾತ್ರೆಯನ್ನು ನಗರದ ಸಿದ್ಧಾರ್ಥ ಬುದ್ಧವಿಹಾರಕ್ಕೆ ಬರಮಾಡಿಕೊಂಡರು.

ಸಿದ್ಧಾರ್ಥ ಬುದ್ಧವಿಹಾರದಲ್ಲಿ ಬುದ್ಧ ವಂದನೆ ಸಲ್ಲಿಸಿದ ನಂತರ ನಡೆದ ಧಮ್ಮ ಸಂದೇಶ ಕಾರ್ಯಕ್ರಮದಲ್ಲಿ ಅಂತರಾಷ್ಟ್ರೀಯ ಬೌದ್ಧ ಯುವ ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷ ಝೆುನ್ ಮಾಂಕ್ ಡಾ. ಶಾಕು ಬೋಧಿ ಧಮ್ಮ ಅವರು ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, 1956ರ ಅಕ್ಟೋಬರ್ 14ರಂದು ಮಹಾರಾಷ್ಟ್ರದ ನಾಗಪುರದ ದೀಕ್ಷಾಭೂಮಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸುಮಾರು ಐದು ಲಕ್ಷ ಅನುಯಾಯಿಗಳೊಂದಿಗೆ ಬೌದ್ಧ ಧಮ್ಮ ಸ್ವೀಕರಿಸಿದ್ದು ಭಾರತದ ಸಾಮಾಜಿಕ ಹಾಗೂ ಧಾರ್ಮಿಕ ಇತಿಹಾಸದಲ್ಲಿ ಮಹತ್ವದ ಮೈಲುಗಲ್ಲಾಗಿದೆ. ಸಮಾನತೆ, ಸ್ವಾತಂತ್ರ್ಯ, ಸಹೋದರತ್ವ ಹಾಗೂ ಮಾನವೀಯ ಮೌಲ್ಯಗಳನ್ನು ಆಧರಿಸಿದ ಬೌದ್ಧ ಧಮ್ಮದ ತತ್ವಗಳನ್ನು ಸಮಾಜದ ಪ್ರತಿಯೊಬ್ಬರಿಗೂ ತಲುಪಿಸುವುದು ಈ ಜನಜಾಗೃತಿ ಯಾತ್ರೆಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಅಂಬೇಡ್ಕರ್ ಅವರ ಬೌದ್ಧ ಧಮ್ಮ ದೀಕ್ಷೆಯ 70ನೇ ವರ್ಷಾಚರಣೆಯ ಸ್ಮರಣಾರ್ಥ ಅಕ್ಟೋಬರ್ 5ರಂದು ಬೆಳಿಗ್ಗೆ ಕಲಬುರಗಿ ನಗರದ ಜಗತ್ ಸರ್ಕಲ್ ನಲ್ಲಿರುವ ಡಾ. ಬಾಬಾಸಾಹೇಬ್ ಅಂಬೇಡ್ಕರ್ ವೃತ್ತದಿಂದ ಯಾತ್ರೆಗೆ ಚಾಲನೆ ನೀಡಲಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ತಾಲೂಕು ಕೇಂದ್ರಗಳಲ್ಲಿ ಸಂಚರಿಸುವ ಈ ಯಾತ್ರೆಯ ಮೂಲಕ ಬುದ್ಧನ ಶಾಂತಿ ಸಂದೇಶ, ವೈಚಾರಿಕ ಚಿಂತನೆ, ಸಾಮಾಜಿಕ ಸಮಾನತೆ ಮತ್ತು ಧಮ್ಮದ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ವಿವರಿಸಿದರು.

ಸುಮಾರು ಒಂದು ತಿಂಗಳ ಕಾಲ ರಾಜ್ಯಾದ್ಯಂತ ಸಂಚರಿಸಲಿರುವ ಯಾತ್ರೆಯು ನವೆಂಬರ್ 1ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಜಿಲ್ಲೆಯ ಐತಿಹಾಸಿಕ ಬೌದ್ಧ ಕ್ಷೇತ್ರ ಸನ್ನತಿಗೆ ತಲುಪಲಿದೆ. ಅಲ್ಲಿ ಬೌದ್ಧ ಸಂಪ್ರದಾಯದಂತೆ ಯಾತ್ರೆಯನ್ನು ಸ್ವಾಗತಿಸಲಾಗುವುದು. ಬಳಿಕ ಮಧ್ಯಾಹ್ನ ಮರಳಿ ಬುದ್ಧನೆಡೆಗೆ ಎಂಬ ಆಶಯದೊಂದಿಗೆ ನಾಡಿನ ಭಿಕ್ಕು ಸಂಘದ ನೇತೃತ್ವದಲ್ಲಿ ಅಂತರಾಷ್ಟ್ರೀಯ ಬೌದ್ಧ ಯುವ ಸಂಘಟನೆ ಹಾಗೂ ಸನ್ನತಿಯ ಬೌದ್ಧ ಮಹಾಸ್ತೂಪ ಅಭಿವೃದ್ಧಿ ಸಂರಕ್ಷಣಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಧಮ್ಮ ದೀಕ್ಷಾ ಕಾರ್ಯಕ್ರಮ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಬೌದ್ಧ ಧಮ್ಮವು ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ, ಮನುಷ್ಯನ ಬದುಕಿನಲ್ಲಿ ನೈತಿಕತೆ, ಕರುಣೆ, ಮೈತ್ರಿ, ಸಹಬಾಳ್ವೆ ಮತ್ತು ಸಮಾನತೆಯ ಮೌಲ್ಯಗಳನ್ನು ಬೆಳೆಸುವ ಜೀವನ ಮಾರ್ಗವಾಗಿದೆ. ಬುದ್ಧ ಹಾಗೂ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಯುವಜನತೆಗೆ ಪರಿಚಯಿಸುವ ಮೂಲಕ ವೈಚಾರಿಕ ಮತ್ತು ಪ್ರಜ್ಞಾವಂತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಧಮ್ಮಚಾರಿ ನರಸಿಂಹಲು, ಸಿದ್ಧಾರ್ಥ ಬುದ್ಧವಿಹಾರ ಸಮಿತಿಯ ಗೌರವಾಧ್ಯಕ್ಷ ರವೀಂದ್ರನಾಥ ಪಟ್ಟಿ, ಉಪಾಧ್ಯಕ್ಷರಾದ ಜಗನ್ನಾಥ ಸುಂಕಾರಿ, ಶ್ರೀನಿವಾಸ ಮಚಾರ್ಲಾ, ಕಾರ್ಯಾಧ್ಯಕ್ಷ ಆರ್. ತಿಮ್ಮಾರೆಡ್ಡಿ, ಪ್ರಧಾನ ಕಾರ್ಯದರ್ಶಿ ಶೇಖರ್ ರಾಂಪೂರಿ, ಖಜಾಂಚಿ ಆರ್. ಬಸವರಾಜ, ಸದಸ್ಯರಾದ ಮಲ್ಲೇಶ್ ಕೊಲಿಮಿ, ಪ್ರಾಣೇಶ್ ಮಂಚಾಲ್, ಕೆ.ಈ. ಕುಮಾರ್, ವೆಂಕಟೇಶ್ ಆರೋಲಿಕರ್ ಹಾಗೂ ಉಪಾಸಕರಾದ ವೆಂಕಟೇಶ್, ಆಂಜನೇಯ, ಸುರೇಶ್, ಕುಬೇರ್ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಬೌದ್ಧ ಉಪಾಸಕರು ಹಾಗೂ ಧಮ್ಮ ಅನುಯಾಯಿಗಳು ಭಾಗವಹಿಸಿದ್ದರು.

# ಜಾಲಹಳ್ಳಿಗೆ ಪುರಸಭೆ ಸ್ಥಾನಮಾನ, ನೂತನ ರೈಲು ಮಾರ್ಗಕ್ಕೆ ಶಿಫಾರಸು ಮಾಡುವಂತೆ ಮನವಿ



ರಾಯಚೂರು, ಅ.7: ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣವನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಬೇಕು ಹಾಗೂ ರಾಯಚೂರುದೇವದುರ್ಗಜಾಲಹಳ್ಳಿ ವಿಜಯಪುರ ಮಾರ್ಗದಲ್ಲಿ ನೂತನ ರೈಲು ಸಂಪರ್ಕ ಕಲ್ಪಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಬೇಕು ಎಂದು ಒತ್ತಾಯಿಸಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರಿಗೆ ಮನವಿ ಸಲ್ಲಿಸಲಾಯಿತು.

ಜಾಲಹಳ್ಳಿ ಪಟ್ಟಣವು ದಿನದಿಂದ ದಿನಕ್ಕೆ ವಿಸ್ತಾರವಾಗುತ್ತಿದ್ದು, 25 ಸಾವಿರಕ್ಕೂ ಅಧಿಕ ಜನಸಂಖ್ಯೆಯನ್ನು ಹೊಂದಿದೆ. ಪ್ರಸ್ತುತ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 33 ಸದಸ್ಯರಿದ್ದು, ಪಟ್ಟಣದಲ್ಲಿ ದೊಡ್ಡ ಪ್ರಮಾಣದಲ್ಲಿ ಸಂತೆ, ವ್ಯಾಪಾರ ಹಾಗೂ ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿವೆ. ಜನಸಂಖ್ಯೆ ಮತ್ತು ಪಟ್ಟಣದ ವ್ಯಾಪ್ತಿ ಹೆಚ್ಚುತ್ತಿರುವುದಕ್ಕೆ ಅನುಗುಣವಾಗಿ ರಸ್ತೆ, ಕುಡಿಯುವ ನೀರು, ಚರಂಡಿ, ಸ್ವಚ್ಛತೆ ಸೇರಿದಂತೆ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಗ್ರಾಮ ಪಂಚಾಯಿತಿಗೆ ದೊರೆಯುವ ಅನುದಾನ ಸಾಕಾಗುತ್ತಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಜಾಲಹಳ್ಳಿ ಈ ಹಿಂದೆ ಪಟ್ಟಣ ಪಂಚಾಯಿತಿ ಸ್ಥಾನಮಾನ ಹೊಂದಿದ್ದ ಹಿನ್ನೆಲೆಯಲ್ಲಿ, ಈಗಿನ ಜನಸಂಖ್ಯೆ, ವ್ಯಾಪಾರ-ವಾಣಿಜ್ಯ ಚಟುವಟಿಕೆಗಳು ಹಾಗೂ ಭವಿಷ್ಯದ ಅಭಿವೃದ್ಧಿಯನ್ನು ಪರಿಗಣಿಸಿ ಪುರಸಭೆಯಾಗಿ ಮೇಲ್ದರ್ಜೆಗೇರಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಇದೇ ವೇಳೆ ರಾಯಚೂರುದೇವದುರ್ಗ ಜಾಲಹಳ್ಳಿವಿಜಯಪುರ ನಡುವೆ ನೂತನ ರೈಲು ಮಾರ್ಗ ನಿರ್ಮಿಸಲು ಕೇಂದ್ರ ರೈಲ್ವೆ ಸಚಿವಾಲಯಕ್ಕೆ ಶಿಫಾರಸು ಮಾಡುವಂತೆ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಈ ರೈಲು ಮಾರ್ಗ ಸಾಕಾರಗೊಂಡಲ್ಲಿ ದೇವದುರ್ಗ ಮತ್ತು ಜಾಲಹಳ್ಳಿ ಭಾಗದ ಜನರಿಗೆ ದೂರದ ನಗರಗಳಿಗೆ ಸಂಪರ್ಕ ಸುಲಭವಾಗುವುದರ ಜೊತೆಗೆ ವ್ಯಾಪಾರ-ವಾಣಿಜ್ಯ ಅಭಿವೃದ್ಧಿಗೆ ಉತ್ತೇಜನ ದೊರೆಯಲಿದೆ. ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗಳಿಗೆ ಸಾಗಿಸಲು, ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಹಾಗೂ ಯುವಕರು ಉದ್ಯೋಗಕ್ಕಾಗಿ ಸಂಚರಿಸಲು ಹೆಚ್ಚಿನ ಅನುಕೂಲವಾಗಲಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಪ್ರಸ್ತಾವಿತ ರೈಲು ಮಾರ್ಗಕ್ಕೆ ಸಂಬಂಧಿಸಿದಂತೆ ಪ್ರಾಥಮಿಕ ಸಮೀಕ್ಷೆ, ಕಾರ್ಯಸಾಧ್ಯತಾ ಅಧ್ಯಯನ ಹಾಗೂ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಬೇಕು ಎಂದು ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ಪತ್ರಕರ್ತ ಖಾಜಾ ಹುಸೇನ್ ಬಾಬಾ, ಸ್ಥಳೀಯ ಮುಖಂಡ ಭೀಮಣ್ಣ ಗುಮೇಧಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಎನ್‌ಎಸ್‌ಎಸ್ ಶಿಬಿರಗಳು ಪೂರಕ: ಅಶೋಕ್ ಪಾಟೀಲ್




ದೇವದುರ್ಗ, ಅ.8: ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ಶಿಸ್ತು, ನಾಯಕತ್ವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಮಹತ್ವದ ವೇದಿಕೆಯಾಗಿದೆ. ಶಿಕ್ಷಣದೊಂದಿಗೆ ಸಮಾಜ ಸೇವೆಯಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಾಗ ವಿದ್ಯಾರ್ಥಿಗಳ ವ್ಯಕ್ತಿತ್ವ ಪರಿಪೂರ್ಣವಾಗಿ ರೂಪುಗೊಳ್ಳಲು ಸಾಧ್ಯ ಎಂದು ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಉಪಾಧ್ಯಕ್ಷ ಹಾಗೂ ಶಿಕ್ಷಣ ಮಹಾವಿದ್ಯಾಲಯದ ಅಧ್ಯಕ್ಷ ಅಶೋಕ್ ಪಾಟೀಲ್ ಅತ್ತನೂರು ಹೇಳಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ಲಾರ ಸಿದ್ದಪ್ಪಗೌಡ ಕರೆಡ್ಡಿ ಶಿಕ್ಷಣ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ಸಹಯೋಗದಲ್ಲಿ ಗಬ್ಬೂರು ಗ್ರಾಮದ ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಲಾಗಿದ್ದ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಗುರುವಾರ ಅವರು ಮಾತನಾಡಿದರು.

ರಾಷ್ಟ್ರೀಯ ಸೇವಾ ಯೋಜನೆಯ ಮೂಲ ಆಶಯವಾದ ಸೇವೆಯ ಮೂಲಕ ವ್ಯಕ್ತಿತ್ವ ವಿಕಸನ ಎಂಬ ತತ್ವವನ್ನು ವಿದ್ಯಾರ್ಥಿಗಳು ಕೇವಲ ಶಿಬಿರದ ಚಟುವಟಿಕೆಗಳಿಗೆ ಸೀಮಿತಗೊಳಿಸದೆ ತಮ್ಮ ದೈನಂದಿನ ಜೀವನದಲ್ಲಿಯೂ ಅಳವಡಿಸಿಕೊಳ್ಳಬೇಕು. ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವ ಗುಣ, ಪರಸ್ಪರ ಸಹಕಾರ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡಾಗ ಉತ್ತಮ ಸಮಾಜ ನಿರ್ಮಾಣಕ್ಕೆ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗಬ್ಬೂರಿನ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಸದಾಶಿವ ಮಠದ ಮಾತನಾಡಿ, ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕದ ಜ್ಞಾನದ ಜೊತೆಗೆ ಪ್ರಾಯೋಗಿಕ ಅನುಭವವನ್ನು ನೀಡುತ್ತವೆ. ಗ್ರಾಮೀಣ ಪ್ರದೇಶದ ಜನರೊಂದಿಗೆ ಬೆರೆತು ಅವರ ಸಮಸ್ಯೆಗಳನ್ನು ಅರಿತುಕೊಳ್ಳುವುದರಿಂದ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಕಾಳಜಿ ಹೆಚ್ಚುತ್ತದೆ. ಇಂತಹ ಶಿಬಿರಗಳು ಯುವಜನರಲ್ಲಿ ನಾಯಕತ್ವ ಗುಣ ಹಾಗೂ ಜವಾಬ್ದಾರಿಯುತ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯ ಅಧ್ಯಕ್ಷ ಮಲ್ಲಿಕಾರ್ಜುನ ದೇಸಾಯಿ ಮಾತನಾಡಿ, ವಿದ್ಯಾರ್ಥಿ ಜೀವನವು ಕೇವಲ ಶೈಕ್ಷಣಿಕ ಸಾಧನೆಗೆ ಸೀಮಿತವಾಗಬಾರದು. ಸಮಾಜದ ಅಭಿವೃದ್ಧಿಗೆ ಪೂರಕವಾದ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮೂಲಕ ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳುವ ಮನೋಭಾವವನ್ನು ವಿದ್ಯಾರ್ಥಿ ದೆಸೆಯಿಂದಲೇ ಬೆಳೆಸಿಕೊಳ್ಳುವುದು ಅಗತ್ಯ ಎಂದು ಹೇಳಿದರು.

ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಗಿರಿ ಮಲ್ಲಪ್ಪ ಕರಡಕಲ್ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರಗಳು ಗ್ರಾಮೀಣ ಬದುಕಿನ ವಾಸ್ತವ ಸ್ಥಿತಿಯನ್ನು ಪರಿಚಯಿಸುವುದರ ಜೊತೆಗೆ ಜನರ ಸಮಸ್ಯೆಗಳನ್ನು ಹತ್ತಿರದಿಂದ ತಿಳಿದುಕೊಳ್ಳಲು ಅವಕಾಶ ಕಲ್ಪಿಸುತ್ತವೆ. ಗ್ರಾಮೀಣ ಸಮುದಾಯದೊಂದಿಗೆ ನೇರ ಸಂಪರ್ಕ ಹೊಂದುವುದರಿಂದ ವಿದ್ಯಾರ್ಥಿಗಳಲ್ಲಿ ಸಹಾನುಭೂತಿ ಹಾಗೂ ಸಾಮಾಜಿಕ ಹೊಣೆಗಾರಿಕೆಯ ಅರಿವು ಮೂಡುತ್ತದೆ ಎಂದು ತಿಳಿಸಿದರು.

ಶಿಕ್ಷಣ ಮಹಾವಿದ್ಯಾಲಯದ ಸದಸ್ಯ ಶಿವಕುಮಾರ್ ವೆಂಕಟಪುರ ಮಾತನಾಡಿ, ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಯಲ್ಲಿ ಪಠ್ಯೇತರ ಚಟುವಟಿಕೆಗಳ ಪಾತ್ರ ಮಹತ್ವದ್ದಾಗಿದೆ. ಎನ್‌ಎಸ್‌ಎಸ್‌ನಂತಹ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಹೊಂದಾಣಿಕೆ ಹಾಗೂ ಸಂಘಟನಾ ಸಾಮರ್ಥ್ಯವನ್ನು ವೃದ್ಧಿಸುತ್ತವೆ ಎಂದರು.

ಮತ್ತೋರ್ವ ಸದಸ್ಯ ಆರ್. ವೀರೇಂದ್ರ ಪಾಟೀಲ್ ಮಾತನಾಡಿ, ಯುವಜನರು ಸೇವಾ ಮನೋಭಾವವನ್ನು ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಂಡು ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸಬೇಕು. ಶಿಕ್ಷಣದೊಂದಿಗೆ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡಾಗ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಗ್ರಾಮದ ಹಿರಿಯ ಮುಖಂಡ ದೊಡ್ಡ ಬೂದಯ್ಯ ತಾತ ಸಾಲಿಮಠ ಮಾತನಾಡಿ, ಶಿಬಿರದ ಅವಧಿಯಲ್ಲಿ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಗಬ್ಬೂರು ಗ್ರಾಮದಲ್ಲಿ ವಿವಿಧ ಸಾಮಾಜಿಕ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಮೆಚ್ಚುಗೆಯ ಸಂಗತಿಯಾಗಿದೆ. ವಿದ್ಯಾರ್ಥಿಗಳ ಇಂತಹ ಸೇವಾ ಕಾರ್ಯಗಳು ಗ್ರಾಮೀಣ ಜನರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ಯುವಜನರಿಗೆ ಪ್ರೇರಣೆಯಾಗುತ್ತವೆ ಎಂದು ಶ್ಲಾಘಿಸಿದರು.

ನಿವೃತ್ತ ಪೊಲೀಸ್ ಅಧಿಕಾರಿ ಹಾಗೂ ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯ ರಾಜಶೇಖರ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಸಮಯಪ್ರಜ್ಞೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ರೂಢಿಸಿಕೊಳ್ಳಬೇಕು. ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ಸಮಾಜದ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಮಂಜುನಾಥ ಪಾಟೀಲ ವಟಗಲ್ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರವು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವವನ್ನು ಬೆಳೆಸುವುದರ ಜೊತೆಗೆ ಗ್ರಾಮೀಣ ಪ್ರದೇಶದ ಸಮಸ್ಯೆಗಳು ಹಾಗೂ ಸಾಮಾಜಿಕ ಪರಿಸ್ಥಿತಿಯನ್ನು ಅರಿತುಕೊಳ್ಳಲು ಉತ್ತಮ ಅವಕಾಶ ಕಲ್ಪಿಸಿದೆ. ಶಿಬಿರದಲ್ಲಿ ಪಡೆದ ಅನುಭವವನ್ನು ವಿದ್ಯಾರ್ಥಿಗಳು ತಮ್ಮ ಮುಂದಿನ ವೃತ್ತಿ ಹಾಗೂ ವೈಯಕ್ತಿಕ ಜೀವನದಲ್ಲಿಯೂ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಶಿಬಿರದ ಸಂಯೋಜಕ ಡಾ. ಸಿದ್ದರಾಮಯ್ಯ ಹಿರೇಮಠ ಅವರು ವಾರ್ಷಿಕ ವಿಶೇಷ ಶಿಬಿರದ ಉದ್ದೇಶ, ಆಯೋಜಿಸಲಾದ ವಿವಿಧ ಕಾರ್ಯಕ್ರಮಗಳು ಹಾಗೂ ವಿದ್ಯಾರ್ಥಿಗಳ ಸಕ್ರಿಯ ಭಾಗವಹಿಸುವಿಕೆಯ ಕುರಿತು ವಿವರಿಸಿದರು. ಶಿಬಿರದ ಮೂಲಕ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಕಾಳಜಿ ಮತ್ತು ಸೇವಾ ಮನೋಭಾವ ಮೂಡಿಸಲು ಪ್ರಯತ್ನಿಸಲಾಗಿದೆ ಎಂದು ತಿಳಿಸಿದರು.

ಸಮಾರೋಪ ಸಮಾರಂಭದ ಅಂಗವಾಗಿ ಗಬ್ಬೂರಿನ ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯ ಪದಾಧಿಕಾರಿಗಳ ವತಿಯಿಂದ ಶಿಕ್ಷಣ ಮಹಾವಿದ್ಯಾಲಯದ ಪದಾಧಿಕಾರಿಗಳು ಹಾಗೂ ಉಪನ್ಯಾಸಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ದೈಹಿಕ ಶಿಕ್ಷಣ ನಿರ್ದೇಶಕ ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ಶಶಿಕುಮಾರ್, ಉಪನ್ಯಾಸಕರಾದ ವೀರನಗೌಡ ಹೇಮರೆಡ್ಡಿ, ಉತ್ತಪ್ಪ, ಶರಣಮ್ಮ, ಹಂಪಮ್ಮ, ಮಾಧುರಿ, ಪ್ರವೀಣ ಕುಮಾರ್, ಈರಪ್ಪ ಸರ್ಜಾಪುರ ಸೇರಿದಂತೆ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು ಹಾಗೂ ಶಾಲೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಎನ್‌ಎಸ್‌ಎಸ್ ಶಿಬಿರಗಳಿಂದ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಕಳಕಳಿ ಮತ್ತು ನಾಯಕತ್ವ ಗುಣ ವೃದ್ಧಿ: ಸದಾಶಿವ ಮಠದ



ಗಬ್ಬುರು, ಅ.8: ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರಗಳು ವಿದ್ಯಾರ್ಥಿಗಳಿಗೆ ಪಠ್ಯಾಧಾರಿತ ಶಿಕ್ಷಣದ ಜೊತೆಗೆ ಸಮಾಜದ ವಾಸ್ತವ ಪರಿಸ್ಥಿತಿಯನ್ನು ಅರ್ಥಮಾಡಿಕೊಳ್ಳಲು ಅವಕಾಶ ಕಲ್ಪಿಸುತ್ತವೆ. ಇಂತಹ ಶಿಬಿರಗಳಲ್ಲಿ ಪಾಲ್ಗೊಳ್ಳುವುದರಿಂದ ಯುವಜನರಲ್ಲಿ ಸೇವಾಭಾವನೆ, ಶಿಸ್ತು, ನಾಯಕತ್ವ ಸಾಮರ್ಥ್ಯ ಹಾಗೂ ಸಮಾಜದ ಬಗೆಗಿನ ಕಾಳಜಿ ವೃದ್ಧಿಯಾಗುತ್ತದೆ ಎಂದು ಗಬ್ಬೂರಿನ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಸದಾಶಿವ ಮಠದ ಅಭಿಪ್ರಾಯಪಟ್ಟರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ಲಾರ ಸಿದ್ದಪ್ಪಗೌಡ ಕರೆಡ್ಡಿ ಶಿಕ್ಷಣ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ಸಹಯೋಗದಲ್ಲಿ ಗಬ್ಬೂರು ಗ್ರಾಮದ ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಗುರುವಾರ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯಾರ್ಥಿಗಳು ಶಿಕ್ಷಣದ ಅವಧಿಯಲ್ಲಿಯೇ ಸಮಾಜಸೇವೆಯಲ್ಲಿ ತೊಡಗಿಸಿಕೊಳ್ಳುವ ಪ್ರವೃತ್ತಿ ಬೆಳೆಸಿಕೊಳ್ಳಬೇಕು. ಗ್ರಾಮೀಣ ಪ್ರದೇಶಗಳಿಗೆ ಭೇಟಿ ನೀಡಿ ಅಲ್ಲಿನ ಜನಜೀವನ, ಸಮಸ್ಯೆಗಳು ಹಾಗೂ ಸಾಮಾಜಿಕ ಪರಿಸ್ಥಿತಿಗಳನ್ನು ನೇರವಾಗಿ ತಿಳಿದುಕೊಳ್ಳುವುದರಿಂದ ಅವರಲ್ಲಿ ಜವಾಬ್ದಾರಿಯ ಪ್ರಜ್ಞೆ ಮೂಡುತ್ತದೆ. ಎನ್‌ಎಸ್‌ಎಸ್ ಚಟುವಟಿಕೆಗಳು ವ್ಯಕ್ತಿತ್ವ ವಿಕಸನಕ್ಕೂ ಪೂರಕವಾಗಿವೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಉಪಸ್ಥಿತರಿದ್ದ ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯ ಅಧ್ಯಕ್ಷ ಮಲ್ಲಿಕಾರ್ಜುನ ದೇಸಾಯಿ, ಜಿಲ್ಲಾ ವೀರಶೈವ ಲಿಂಗಾಯತ ಸಮಾಜ ಹಾಗೂ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಗಿರಿ ಮಲ್ಲಪ್ಪ ಕರಡಕಲ್, ಮಹಾವಿದ್ಯಾಲಯದ ಸದಸ್ಯ ಶಿವಕುಮಾರ್ ವೆಂಕಟಾಪುರ, ನಿವೃತ್ತ ಪೊಲೀಸ್ ಅಧಿಕಾರಿ ರಾಜಶೇಖರ, ಆರ್. ವಿರೇಂದ್ರ ಪಾಟೀಲ್ ಹಾಗೂ ಗಬ್ಬೂರಿನ ಹಿರಿಯ ಮುಖಂಡ ದೊಡ್ಡ ಬೂದಯ್ಯ ತಾತ ಸಾಲಿಮಠ ಮಾತನಾಡಿ, ಶಿಬಿರಾರ್ಥಿಗಳು ಗ್ರಾಮಸ್ಥರೊಂದಿಗೆ ನೇರ ಸಂಪರ್ಕ ಸಾಧಿಸಿ ಅವರ ಬದುಕಿನ ವಿವಿಧ ಆಯಾಮಗಳನ್ನು ತಿಳಿದುಕೊಂಡಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಮಂಜುನಾಥ ಪಾಟೀಲ ವಟಗಲ್ ಮಾತನಾಡಿ, ಭವಿಷ್ಯದ ಶಿಕ್ಷಕರಾಗಿ ರೂಪುಗೊಳ್ಳುತ್ತಿರುವ ಪ್ರಶಿಕ್ಷಣಾರ್ಥಿಗಳಿಗೆ ಸಾಮಾಜಿಕ ಅನುಭವ ಅತ್ಯಂತ ಅಗತ್ಯವಾಗಿದೆ. ರಾಷ್ಟ್ರೀಯ ಸೇವಾ ಯೋಜನೆಯಂತಹ ಕಾರ್ಯಕ್ರಮಗಳು ಅವರಲ್ಲಿ ಸಹಕಾರ ಮನೋಭಾವ, ಸಾರ್ವಜನಿಕ ಸೇವೆಯ ಆಸಕ್ತಿ ಹಾಗೂ ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವ ಗುಣಗಳನ್ನು ಬೆಳೆಸಲು ನೆರವಾಗುತ್ತವೆ ಎಂದು ಹೇಳಿದರು.

ಶಿಬಿರದ ಸಂಯೋಜಕ ಡಾ. ಸಿದ್ದರಾಮಯ್ಯ ಹಿರೇಮಠ ಶಿಬಿರದ ಚಟುವಟಿಕೆಗಳ ಕುರಿತು ಮಾಹಿತಿ ನೀಡಿ, ವಿಶೇಷ ಶಿಬಿರದ ಅವಧಿಯಲ್ಲಿ ಗ್ರಾಮ ಸಮೀಕ್ಷೆ, ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳು, ಯೋಗಾಸನ ಅಭ್ಯಾಸ, ಸಾಂಸ್ಕೃತಿಕ ಚಟುವಟಿಕೆಗಳು ಸೇರಿದಂತೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಈ ಎಲ್ಲ ಚಟುವಟಿಕೆಗಳಲ್ಲಿ ಪ್ರಶಿಕ್ಷಣಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿದ್ದರು ಎಂದು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಉಪಾಧ್ಯಕ್ಷ ಹಾಗೂ ಶಿಕ್ಷಣ ಮಹಾವಿದ್ಯಾಲಯದ ಅಧ್ಯಕ್ಷ ಅಶೋಕ ಪಾಟೀಲ್ ಅತ್ತನೂರು ಮಾತನಾಡಿ, ಶಿಕ್ಷಣವೆಂದರೆ ಕೇವಲ ಪದವಿ ಪಡೆಯುವುದಕ್ಕೆ ಸೀಮಿತವಾಗಬಾರದು. ವಿದ್ಯಾರ್ಥಿಗಳು ಸಮಾಜದ ಅಭಿವೃದ್ಧಿಯಲ್ಲಿ ತಮ್ಮದೇ ಆದ ಕೊಡುಗೆ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು. ಎನ್‌ಎಸ್‌ಎಸ್ ಶಿಬಿರಗಳು ಯುವಜನರನ್ನು ಸೇವಾನಿಷ್ಠೆ, ಮಾನವೀಯ ಮೌಲ್ಯಗಳು ಹಾಗೂ ಸಾಮಾಜಿಕ ಹೊಣೆಗಾರಿಕೆಯುಳ್ಳ ನಾಗರಿಕರನ್ನಾಗಿ ರೂಪಿಸಲು ಸಹಕಾರಿಯಾಗಿವೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ದೈಹಿಕ ಶಿಕ್ಷಣ ನಿರ್ದೇಶಕ ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಶಶಿಕುಮಾರ್, ಉಪನ್ಯಾಸಕರಾದ ವೀರನಗೌಡ ಹೇಮರೆಡ್ಡಿ, ಉತ್ತಪ್ಪ, ಶರಣಮ್ಮ, ಹಂಪಮ್ಮ, ಮಾಧುರಿ, ಪ್ರವೀಣಕುಮಾರ್, ಈರಪ್ಪ ಸರ್ಜಾಪುರ ಸೇರಿದಂತೆ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ಹೂವಿನಡಗಿ ಕೃಷ್ಣಾ ನದಿ ಸೇತುವೆ ದುರಸ್ತಿಗೆ ರೈತ ಸಂಘದ ಆಗ್ರಹ



ದೇವದುರ್ಗ, ಅ.8: ತಾಲೂಕಿನ ಹೂವಿನಡಗಿ ಗ್ರಾಮದ ಸಮೀಪ ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ಸೇತುವೆಯ ಮೇಲ್ಭಾಗದಲ್ಲಿ ತಗ್ಗು-ಗುಂಡಿಗಳು ಉಂಟಾಗಿ ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೂಡಲೇ ದುರಸ್ತಿ ಕಾರ್ಯ ಆರಂಭಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಚುನ್ನಪ್ಪ ಪೂಜೇರಿ ಬಣ) ತಾಲೂಕು ಘಟಕದ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ದೇವದುರ್ಗಶಾಹಪುರ ಮುಖ್ಯರಸ್ತೆಯಲ್ಲಿರುವ ಈ ಸೇತುವೆಯು ಎರಡು ಭಾಗಗಳ ನಡುವಿನ ಪ್ರಮುಖ ಸಂಪರ್ಕ ಮಾರ್ಗವಾಗಿದ್ದು, ಪ್ರತಿನಿತ್ಯ ನೂರಾರು ವಾಹನಗಳು ಸಂಚರಿಸುತ್ತವೆ. ಬಸ್‌ಗಳು, ಸರಕು ಸಾಗಣೆ ವಾಹನಗಳು ಹಾಗೂ ದ್ವಿಚಕ್ರ ವಾಹನಗಳು ಸೇರಿದಂತೆ ಭಾರಿ ವಾಹನಗಳ ಓಡಾಟವೂ ಹೆಚ್ಚಾಗಿದೆ. ಆದರೆ ಸೇತುವೆಯ ಮೇಲಿನ ರಸ್ತೆ ಹದಗೆಟ್ಟಿರುವುದರಿಂದ ವಾಹನ ಸವಾರರು ತೀವ್ರ ಸಮಸ್ಯೆ ಎದುರಿಸುವಂತಾಗಿದೆ ಎಂದು ಸಂಘದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸೇತುವೆಯ ವಿವಿಧೆಡೆ ಗುಂಡಿಗಳು ನಿರ್ಮಾಣವಾಗಿರುವುದರಿಂದ ವಾಹನ ಚಾಲಕರು ಎಚ್ಚರಿಕೆಯಿಂದ ಸಂಚರಿಸಬೇಕಾದ ಪರಿಸ್ಥಿತಿ ಎದುರಾಗಿದೆ. ವಿಶೇಷವಾಗಿ ರಾತ್ರಿ ವೇಳೆ ಸಂಚರಿಸುವ ವಾಹನ ಸವಾರರಿಗೆ ಅಪಾಯದ ಸಾಧ್ಯತೆ ಹೆಚ್ಚಿದ್ದು, ಯಾವುದೇ ಕ್ಷಣದಲ್ಲಿ ಅಪಘಾತ ಸಂಭವಿಸಬಹುದೆಂಬ ಆತಂಕ ಸಾರ್ವಜನಿಕರಲ್ಲಿ ಮನೆಮಾಡಿದೆ. ಈ ಮಾರ್ಗವನ್ನು ಅವಲಂಬಿಸಿರುವ ರೈತರು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಸೇತುವೆಯ ದುರಸ್ತಿಗೆ ಆದ್ಯತೆ ನೀಡಬೇಕೆಂದು ಆಗ್ರಹಿಸಿದ್ದಾರೆ.

ಸೇತುವೆಯ ದುರಸ್ತಿ ಕಾಮಗಾರಿಗೆ ಸಂಬಂಧಿಸಿದಂತೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿರುವ ಮಾಹಿತಿ ಇದ್ದರೂ ಕಾಮಗಾರಿ ಆರಂಭಿಸುವಲ್ಲಿ ವಿಳಂಬವಾಗುತ್ತಿದೆ ಎಂದು ರೈತ ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ. ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ತಕ್ಷಣವೇ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಮಳೆಯ ಸಂದರ್ಭದಲ್ಲಿ ಸೇತುವೆಯ ಮೇಲಿರುವ ಗುಂಡಿಗಳಲ್ಲಿ ನೀರು ನಿಂತು ವಾಹನ ಸಂಚಾರಕ್ಕೆ ಮತ್ತಷ್ಟು ತೊಂದರೆಯಾಗುವ ಸಾಧ್ಯತೆಯಿದೆ. ಹೀಗಾಗಿ ತಾತ್ಕಾಲಿಕವಾಗಿ ಗುಂಡಿಗಳನ್ನು ಮುಚ್ಚುವುದಕ್ಕೆ ಸೀಮಿತವಾಗದೆ, ದೀರ್ಘಕಾಲ ಬಾಳಿಕೆ ಬರುವ ರೀತಿಯಲ್ಲಿ ಗುಣಮಟ್ಟದ ದುರಸ್ತಿ ಕಾಮಗಾರಿ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಬೇಕೆಂದು ಸಂಘದ ಮುಖಂಡರು ಆಗ್ರಹಿಸಿದ್ದಾರೆ.

ಸೇತುವೆಯ ದುಸ್ಥಿತಿಯ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೆ ಕೂಡಲೇ ಕ್ರಮ ಕೈಗೊಳ್ಳಬೇಕು. ದುರಸ್ತಿ ಕಾಮಗಾರಿ ಆರಂಭಿಸಲು ಮತ್ತಷ್ಟು ವಿಳಂಬವಾದರೆ ರೈತ ಸಂಘದ ನೇತೃತ್ವದಲ್ಲಿ ಹೋರಾಟ ನಡೆಸುವ ಮೂಲಕ ಅಧಿಕಾರಿಗಳ ಗಮನ ಸೆಳೆಯಲಾಗುವುದು ಎಂದು ಪದಾಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಹನುಮಂತ್ರಾಯ ದೊರೆ, ಗೌರವಾಧ್ಯಕ್ಷ ಮಹೇಂದ್ರ, ಉಪಾಧ್ಯಕ್ಷ ತಿಮ್ಮನಗೌಡ ಬಕ್ರಿ, ಪ್ರಧಾನ ಕಾರ್ಯದರ್ಶಿ ಮಾರುತಿ ನಾಯಕ, ಸುಗರೆಡ್ಡಿಗೌಡ, ಇಬ್ರಾಹಿಂ ಸಾಬ್, ಶರಣು ನಾಯಕ ಸೇರಿದಂತೆ ಸಂಘದ ವಿವಿಧ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಜೆಸ್ಕಾಂ ಗುತ್ತಿಗೆ ಕಾರ್ಮಿಕರಿಗೆ ಪರಿಷ್ಕೃತ ವೇತನ ನೀಡಲು ಆಗ್ರಹಿಸಿ ಅಹೋರಾತ್ರಿ ಧರಣಿ




ರಾಯಚೂರು, ಅ.8: ರಾಜ್ಯ ಸರ್ಕಾರ ನಿಗದಿಪಡಿಸಿರುವ ಪರಿಷ್ಕೃತ ಕನಿಷ್ಠ ವೇತನವನ್ನು ಜಾರಿಗೊಳಿಸುವುದರ ಜೊತೆಗೆ ಉದ್ಯೋಗ ಭದ್ರತೆ ಹಾಗೂ ಶಾಸನಬದ್ಧ ಸೌಲಭ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಜೆಸ್ಕಾಂ ರಾಯಚೂರು ವಿಭಾಗದ ಗುತ್ತಿಗೆ ಕಾರ್ಮಿಕರು ಗುರುವಾರ ನಗರದಲ್ಲಿ ಅಹೋರಾತ್ರಿ ಧರಣಿ ಆರಂಭಿಸಿದರು.

ಕರ್ನಾಟಕ ರಾಜ್ಯ ವಿದ್ಯುತ್ ಕಾರ್ಮಿಕರ ಫೆಡರೇಷನ್ (ಕೆಎಸ್‌ಇಡಬ್ಲ್ಯುಎಫ್) ಜಿಲ್ಲಾ ಸಮಿತಿ ನೇತೃತ್ವದಲ್ಲಿ ನಗರದ ಟಿಪ್ಪು ಸುಲ್ತಾನ್ ಗಾರ್ಡನ್‌ನಲ್ಲಿ ಜಮಾಯಿಸಿದ ಕಾರ್ಮಿಕರು, ತಮ್ಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಆರೋಪಿಸಿ ಆಕ್ರೋಶ ವ್ಯಕ್ತಪಡಿಸಿದರು.

ಜೆಸ್ಕಾಂ ರಾಯಚೂರು ವಿಭಾಗದಲ್ಲಿ ನೂರಕ್ಕೂ ಅಧಿಕ ಗುತ್ತಿಗೆ ಕಾರ್ಮಿಕರು ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರೂ ಸರ್ಕಾರದ ನಿಯಮಾನುಸಾರ ದೊರೆಯಬೇಕಾದ ವೇತನ ಹಾಗೂ ಇತರ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಸರ್ಕಾರ ಹೊರಡಿಸಿರುವ ಪರಿಷ್ಕೃತ ಕನಿಷ್ಠ ವೇತನದ ಅಧಿಸೂಚನೆಯನ್ನು ಅನುಷ್ಠಾನಗೊಳಿಸಿ, 2026ರ ಜೂನ್ ತಿಂಗಳಿಂದ ಅನ್ವಯವಾಗುವಂತೆ ವೇತನ ವ್ಯತ್ಯಾಸದ ಬಾಕಿ ಮೊತ್ತವನ್ನು ಪಾವತಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪರಿಷ್ಕೃತ ವೇತನ ನೀಡುವ ವಿಚಾರದಲ್ಲಿ ಗುತ್ತಿಗೆದಾರರು ಕಾರ್ಮಿಕರಿಗೆ ಅನಗತ್ಯ ಕಿರುಕುಳ ನೀಡುತ್ತಿದ್ದಾರೆ ಎಂದು ಸಂಘದ ಮುಖಂಡರು ಆರೋಪಿಸಿದರು. ಹೆಚ್ಚುವರಿಯಾಗಿ ಪಾವತಿಸುವ ವೇತನದ ಒಂದು ಭಾಗವನ್ನು ಪ್ರತಿ ತಿಂಗಳು ಹಿಂದಿರುಗಿಸುವಂತೆ ಒತ್ತಡ ಹೇರಲಾಗುತ್ತಿದೆ. ಇದಕ್ಕೆ ಒಪ್ಪದ ಕಾರ್ಮಿಕರಿಗೆ ಪರಿಷ್ಕೃತ ವೇತನ ನೀಡದೆ ತಾರತಮ್ಯ ಮಾಡಲಾಗುತ್ತಿದೆ. ಅಲ್ಲದೆ, ಖಾಲಿ ಕಾಗದಗಳ ಮೇಲೆ ಸಹಿ ಪಡೆಯುವ ಮೂಲಕ ಕಾರ್ಮಿಕರನ್ನು ಸಂಕಷ್ಟಕ್ಕೆ ಸಿಲುಕಿಸಲಾಗುತ್ತಿದೆ ಎಂದು ದೂರಿದರು.

ವಿದ್ಯುತ್ ಸರಬರಾಜು ವ್ಯವಸ್ಥೆಯ ನಿರ್ವಹಣೆಯಲ್ಲಿ ಗುತ್ತಿಗೆ ಕಾರ್ಮಿಕರು ಪ್ರಮುಖ ಪಾತ್ರ ವಹಿಸುತ್ತಿದ್ದರೂ ಅವರ ಹಿತಾಸಕ್ತಿಗಳನ್ನು ಕಡೆಗಣಿಸಲಾಗುತ್ತಿದೆ. ದೀರ್ಘಕಾಲದಿಂದ ದುಡಿಯುತ್ತಿರುವ ಕಾರ್ಮಿಕರಿಗೆ ಸಮರ್ಪಕ ಉದ್ಯೋಗ ಭದ್ರತೆ ಇಲ್ಲದಿರುವುದು ಆತಂಕಕಾರಿ ಸಂಗತಿಯಾಗಿದೆ. ಕಾರ್ಮಿಕರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ನೀಡುವುದರ ಜೊತೆಗೆ ಅವರ ಕಾನೂನುಬದ್ಧ ಹಕ್ಕುಗಳನ್ನು ರಕ್ಷಿಸುವ ಜವಾಬ್ದಾರಿಯನ್ನು ಜೆಸ್ಕಾಂ ಆಡಳಿತ ವಹಿಸಿಕೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿ ತಿಂಗಳ 7ನೇ ತಾರೀಖಿನೊಳಗೆ ಕಾರ್ಮಿಕರ ಬ್ಯಾಂಕ್ ಖಾತೆಗಳಿಗೆ ವೇತನ ಜಮಾ ಮಾಡಬೇಕು. ಇದುವರೆಗೆ ಸಮರ್ಪಕವಾಗಿ ಒದಗಿಸದ ನೌಕರರ ರಾಜ್ಯ ವಿಮೆ (ಇಎಸ್‌ಐ) ಸೌಲಭ್ಯವನ್ನು ತಕ್ಷಣ ಜಾರಿಗೊಳಿಸಿ ಪ್ರತಿಯೊಬ್ಬ ಅರ್ಹ ಕಾರ್ಮಿಕರಿಗೂ ಇಎಸ್‌ಐ ಕಾರ್ಡ್ ವಿತರಿಸಬೇಕು. ಭವಿಷ್ಯ ನಿಧಿ (ಪಿಎಫ್) ವಂತಿಗೆ ಪಾವತಿಯ ವಿವರ ಹಾಗೂ ರಶೀದಿಗಳನ್ನು ಕಾರ್ಮಿಕರಿಗೆ ನಿಯಮಿತವಾಗಿ ಒದಗಿಸಬೇಕು ಎಂದು ಒತ್ತಾಯಿಸಿದರು.

ಕಾರ್ಮಿಕರ ವೇತನ ಮತ್ತು ಸೌಲಭ್ಯಗಳ ವಿಚಾರದಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಗುತ್ತಿಗೆದಾರರಿಂದ ಕಾರ್ಮಿಕರಿಗೆ ಯಾವುದೇ ರೀತಿಯ ಒತ್ತಡ ಅಥವಾ ಶೋಷಣೆ ಉಂಟಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಂಘದ ಪದಾಧಿಕಾರಿಗಳು ಆಗ್ರಹಿಸಿದರು.

ತಮ್ಮ ಬೇಡಿಕೆಗಳಿಗೆ ಸ್ಪಂದಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಅಹೋರಾತ್ರಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಮುಖಂಡರು ತಿಳಿಸಿದರು.

ಪ್ರತಿಭಟನೆಯ ನೇತೃತ್ವವನ್ನು ಫೆಡರೇಷನ್ ರಾಜ್ಯಾಧ್ಯಕ್ಷ ಸತ್ಯಬಾಬು, ಜಿಲ್ಲಾಧ್ಯಕ್ಷ ಕರಿಗೂಳಿ ವೀರೇಶ್ ನಾಗಲಾಪುರ ಹಾಗೂ ಗೌರವಾಧ್ಯಕ್ಷ ಡಿ.ಎಸ್. ಶರಣಬಸವ ವಹಿಸಿದ್ದರು. ಮೌನೇಶ್, ಅಮರೇಶ್, ಶರಣಪ್ಪ ಸೇರಿದಂತೆ ನೂರಾರು ಗುತ್ತಿಗೆ ಕಾರ್ಮಿಕರು ಹೋರಾಟದಲ್ಲಿ ಪಾಲ್ಗೊಂಡಿದ್ದರು.

# ಅ.12ರಂದು ವಿವಿಧ ಬೇಡಿಕೆಗಳ ಈಡೇರಿಕೆಗೆ ಎಐಕೆಎಸ್ ಬೃಹತ್ ಪ್ರತಿಭಟನೆ: ಬಸಲಿಂಗಪ್ಪ



ಮಾನ್ವಿ: ಬರಗಾಲದಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ರಾಜ್ಯ ಸರ್ಕಾರ ಸಮರ್ಪಕ ಪರಿಹಾರ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅ.12ರಂದು ಮಾನ್ವಿ ಪಟ್ಟಣದಲ್ಲಿ ಅಖಿಲ ಭಾರತ ಕಿಸಾನ್ ಸಂಘಟನೆ (ಎಐಕೆಎಸ್) ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟನೆಯ ರಾಜ್ಯ ಸಂಚಾಲಕ ಬಸಲಿಂಗಪ್ಪ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅ.12ರಂದು ಬೆಳಿಗ್ಗೆ ಶಾಸಕರ ಭವನದಿಂದ ನೂರಾರು ಕಾರ್ಯಕರ್ತರೊಂದಿಗೆ ಪ್ರತಿಭಟನಾ ಮೆರವಣಿಗೆ ಆರಂಭಿಸಿ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ತಹಶೀಲ್ದಾರ್ ಕಚೇರಿಗೆ ತೆರಳಿ ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ಉಂಟಾಗಿದ್ದು, ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸೂಕ್ತ ಪರಿಹಾರ ನೀಡಬೇಕು. ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಮಾಡಿಸಿಕೊಂಡಿರುವ ರೈತರಿಗೆ ವಿಮಾ ಕಂಪನಿಗಳು ಬಾಕಿ ಇರುವ ಪರಿಹಾರವನ್ನು ಶೀಘ್ರ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ತುಂಗಭದ್ರಾ ಕಾಲುವೆಯ ಕೆಳಭಾಗದ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ಹರಿಸಲು ಕ್ರಮ ಕೈಗೊಳ್ಳಬೇಕು. ಸರ್ಕಾರಿ ಭೂಮಿಯಲ್ಲಿ ಹಲವು ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ಅರ್ಹ ರೈತರಿಗೆ ಹಕ್ಕುಪತ್ರ ನೀಡಬೇಕು. ನಿವೇಶನ ರಹಿತ ಬಡ ಕುಟುಂಬಗಳಿಗೆ ನಿವೇಶನ ಹಂಚಿಕೆ ಮಾಡಬೇಕು ಹಾಗೂ ಸಾರ್ವಜನಿಕ ಸರ್ಕಾರಿ ಕೆರೆಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಆಗ್ರಹಿಸಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯನ್ನು ರದ್ದುಪಡಿಸಬೇಕು ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂಬ ಬೇಡಿಕೆಯನ್ನೂ ಪ್ರತಿಭಟನೆಯಲ್ಲಿ ಮುಂದಿಡಲಾಗುವುದು ಎಂದು ಬಸಲಿಂಗಪ್ಪ ತಿಳಿಸಿದರು.

ಕೃಷಿಗೆ ಸಂಬಂಧಿಸಿದ ಕಾನೂನುಗಳ ವಿರುದ್ಧವೂ ಪ್ರತಿಭಟನೆಯಲ್ಲಿ ಧ್ವನಿ ಎತ್ತಲಾಗುವುದು. ಮಾನ್ವಿ ಸಮೀಪದ ಮಲ್ಲಯ್ಯನ ಗುಡ್ಡದಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ನಡೆಯುತ್ತಿದೆ ಎಂಬ ಆರೋಪವಿದ್ದು, ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಟಿಯುಸಿಐ ರಾಜ್ಯಾಧ್ಯಕ್ಷ ಎಂ.ಡಿ. ಮೈಬೂಬ್ ಸಾಬ್, ಎಐಕೆಎಸ್ ಜಿಲ್ಲಾಧ್ಯಕ್ಷ ವಿ. ಮುದುಕಪ್ಪ ನಾಯಕ, ಉಪಾಧ್ಯಕ್ಷ ಆನಂದ ಭೋವಿ, ತಾಲೂಕು ಅಧ್ಯಕ್ಷ ದಿಲೀಪ್ ಟೈಲರ್, ತಾಲೂಕು ಉಪಾಧ್ಯಕ್ಷ ಯಲ್ಲಪ್ಪ ನಾಯಕ, ನರಸಪ್ಪ ಕಂಬಳತ್ತಿ, ಆಂಜನೇಯ್ಯ ಬಲ್ಲಟಗಿ, ಪ್ರಸಾದ, ದೇವಪ್ಪ ಗುಡದಿನ್ನಿ, ಭೀಮರಾಯ ಗುಡದಿನ್ನಿ, ವಿರೇಶ ಕುರ್ಡಿ, ಹುಚ್ಚರೆಡ್ಡಿ, ಮಲ್ಲಪ್ಪಗೌಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಪಾರದರ್ಶಕತೆ ಕಾಪಾಡಿ: ಎನ್.ಎಸ್. ಬೋಸರಾಜು ಆಗ್ರಹ



ಲಿಂಗಸುಗೂರು: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯಲ್ಲಿ ಅಕ್ರಮ ನಡೆಯುತ್ತಿದೆ ಎಂಬ ಆರೋಪಗಳಿಗೆ ಚುನಾವಣಾ ಆಯೋಗ ಸ್ಪಷ್ಟನೆ ನೀಡಬೇಕು. ಮತದಾರರ ಹಕ್ಕುಗಳು ಹಾಗೂ ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ಪ್ರಶ್ನಿಸಿ ಪ್ರತಿಭಟನೆ ನಡೆಸಿದ ವಿರೋಧ ಪಕ್ಷದ ನಾಯಕರನ್ನು ದೆಹಲಿ ಪೊಲೀಸರು ವಶಕ್ಕೆ ಪಡೆದಿರುವುದು ಖಂಡನೀಯ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು.

ಎಐಸಿಸಿ ನಿರ್ದೇಶನದ ಮೇರೆಗೆ ಗುರುವಾರ ಲಿಂಗಸುಗೂರಿನಲ್ಲಿ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಕರಾಳ ದಿನ ಆಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮತದಾರರ ಪಟ್ಟಿಯ ಪರಿಷ್ಕರಣೆ ಹಾಗೂ ವೋಟ್ ಚೋರಿ ಆರೋಪಗಳಿಗೆ ಸಂಬಂಧಿಸಿದಂತೆ ದೆಹಲಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಕೆ.ಸಿ. ವೇಣುಗೋಪಾಲ್ ಸೇರಿದಂತೆ ಇಂಡಿಯಾ ಮೈತ್ರಿಕೂಟದ ನಾಯಕರನ್ನು ಪೊಲೀಸರು ವಶಕ್ಕೆ ಪಡೆದಿರುವುದನ್ನು ಖಂಡಿಸಿದರು.

ಮತದಾರರ ಪಟ್ಟಿಯಲ್ಲಿ ನಡೆಯುವ ಸೇರ್ಪಡೆ, ತಿದ್ದುಪಡಿ ಹಾಗೂ ಹೆಸರುಗಳ ತೆಗೆದುಹಾಕುವಿಕೆ ಸೇರಿದಂತೆ ಎಲ್ಲ ಪ್ರಕ್ರಿಯೆಗಳಲ್ಲೂ ಪಾರದರ್ಶಕತೆ ಇರಬೇಕು. ಈ ಕುರಿತು ಸಾರ್ವಜನಿಕರಲ್ಲಿ ಉಂಟಾಗಿರುವ ಅನುಮಾನಗಳಿಗೆ ಚುನಾವಣಾ ಆಯೋಗ ಸಮರ್ಪಕ ಉತ್ತರ ನೀಡಬೇಕು ಎಂದು ಒತ್ತಾಯಿಸಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂಬ ಬೇಡಿಕೆಯನ್ನು ಮುಂದಿಟ್ಟ ಬೋಸರಾಜು, ಮತದಾರರ ಹಕ್ಕುಗಳ ರಕ್ಷಣೆಗಾಗಿ ಹಾಗೂ ವೋಟ್ ಚೋರಿ ಆರೋಪಗಳ ವಿರುದ್ಧ ಕಾಂಗ್ರೆಸ್ ಹೋರಾಟ ಮುಂದುವರಿಸಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ಬಸನಗೌಡ ತುರ್ವಿಹಾಳ, ಮಾನ್ವಿ ಶಾಸಕ ಹಂಪಯ್ಯ ನಾಯಕ, ಮಾಜಿ ಶಾಸಕ ಡಿ.ಎಸ್. ಹುಲಗೇರಿ, ಬಸನಗೌಡ ಬಾದರ್ಲಿ, ಜಯಂತರಾವ್ ಪತಂಗೆ, ಲಿಂಗಸುಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪಕ್ಷದ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕಪಗಲ್‌ನಲ್ಲಿ ಅ.11ರಿಂದ 127ನೇ ವರ್ಷದ ಶ್ರೀ ಶಾಂಭವಿ ಪುರಾಣ ಪ್ರವಚನ



ಮಾನ್ವಿ, ಅ.8: ತಾಲೂಕಿನ ಕಪಗಲ್ ಗ್ರಾಮದಲ್ಲಿ ಧಾರ್ಮಿಕ ಪರಂಪರೆಯ ಪ್ರತೀಕವಾಗಿ ಪ್ರತಿವರ್ಷ ಆಚರಿಸಿಕೊಂಡು ಬರುತ್ತಿರುವ ಶ್ರೀ ಶಾಂಭವಿ ಪುರಾಣ ಪ್ರವಚನ ಕಾರ್ಯಕ್ರಮವು ಈ ಬಾರಿ 127ನೇ ವರ್ಷಕ್ಕೆ ಕಾಲಿಟ್ಟಿದ್ದು, ಅಕ್ಟೋಬರ್ 11ರಿಂದ 19ರವರೆಗೆ ಒಂಬತ್ತು ದಿನಗಳ ಕಾಲ ಭಕ್ತಿಭಾವ ಹಾಗೂ ಸಡಗರದಿಂದ ಜರುಗಲಿದೆ.

ಗ್ರಾಮದ ಶ್ರೀ ಶಾಂಭವಿ ಸಂಘ, ಶ್ರೀ ವಾಸವಿ ಯುವಜನ ಸಂಘ ಹಾಗೂ ಶ್ರೀ ವಾಸವಿ ಮಹಿಳಾ ಮಂಡಳಿಯ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಧಾರ್ಮಿಕ ಆಚರಣೆಗಳ ಮೂಲಕ ಗ್ರಾಮದಲ್ಲಿ ಆಧ್ಯಾತ್ಮಿಕ ವಾತಾವರಣ ನಿರ್ಮಿಸಲು ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.

ಅಕ್ಟೋಬರ್ 11ರಿಂದ 19ರವರೆಗೆ ಪ್ರತಿದಿನ ಸಂಜೆ 7 ಗಂಟೆಯಿಂದ ರಾತ್ರಿ 9.30ರವರೆಗೆ ಶ್ರೀ ಶಾಂಭವಿ ಪುರಾಣ ಪ್ರವಚನ ನಡೆಯಲಿದೆ. ಕಾರ್ಯಕ್ರಮದ ಅಂಗವಾಗಿ ವಿಶೇಷ ಪೂಜೆ, ಧಾರ್ಮಿಕ ವಿಧಿವಿಧಾನಗಳು ಹಾಗೂ ವಿವಿಧ ಆಧ್ಯಾತ್ಮಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ.

ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ಈ ಧಾರ್ಮಿಕ ಆಚರಣೆಯು ಗ್ರಾಮದ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಪುರಾಣ ಪ್ರವಚನದ ಮೂಲಕ ಭಕ್ತರಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವುದರ ಜೊತೆಗೆ ನೈತಿಕ ಮೌಲ್ಯಗಳು, ಸೌಹಾರ್ದತೆ ಹಾಗೂ ಆಧ್ಯಾತ್ಮಿಕ ಚಿಂತನೆಗಳನ್ನು ಪ್ರೋತ್ಸಾಹಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಒಂಬತ್ತು ದಿನಗಳ ಕಾಲ ನಡೆಯುವ ಧಾರ್ಮಿಕ ಕಾರ್ಯಕ್ರಮಕ್ಕೆ ಆಗಮಿಸುವ ಭಕ್ತರಿಗೆ ಅನುಕೂಲವಾಗುವಂತೆ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲಾಗುತ್ತಿದೆ. ಕಪಗಲ್ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪುರಾಣ ಪ್ರವಚನ ಆಲಿಸಿ, ಶ್ರೀ ಶಾಂಭವಿ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ಶಾಂಭವಿ ಸಂಘ, ಶ್ರೀ ವಾಸವಿ ಯುವಜನ ಸಂಘ ಹಾಗೂ ಶ್ರೀ ವಾಸವಿ ಮಹಿಳಾ ಮಂಡಳಿಯ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

# ಇಇ ವೆಂಕಟೇಶ್ ಗಲಗ್ ವರ್ಗಾವಣೆ ಹಿಂದೆ ರಾಜಕೀಯ ಹಸ್ತಕ್ಷೇಪದ ಶಂಕೆ: ವಿಶ್ವನಾಥ್ ಬಲ್ಲಿದವ್ ಆರೋಪ



ದೇವದುರ್ಗ, ಅ.8: ರಾಯಚೂರು ಜಿಲ್ಲೆಯ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಎಂಜಿನಿಯರ್ ವೆಂಕಟೇಶ್ ಗಲಗ್ ಅವರನ್ನು ದಿಢೀರ್ ವರ್ಗಾವಣೆ ಮಾಡಿರುವ ಕ್ರಮದ ಹಿಂದೆ ರಾಜಕೀಯ ಒತ್ತಡ ಹಾಗೂ ಪ್ರಭಾವಿ ನಾಯಕರ ಹಸ್ತಕ್ಷೇಪವಿರುವ ಅನುಮಾನ ವ್ಯಕ್ತವಾಗುತ್ತಿದೆ. ಸರ್ಕಾರ ಕೂಡಲೇ ವರ್ಗಾವಣೆ ಆದೇಶವನ್ನು ಹಿಂಪಡೆಯದಿದ್ದರೆ ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಲ್ಲಿ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ವಿಶ್ವನಾಥ್ ಬಲ್ಲಿದವ್ ಎಚ್ಚರಿಕೆ ನೀಡಿದರು.

ಪಟ್ಟಣದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವೆಂಕಟೇಶ್ ಗಲಗ್ ಅವರ ವರ್ಗಾವಣೆ ಆದೇಶ ಹೊರಡಿಸಿರುವ ಸಂದರ್ಭ, ಅದರ ಹಿಂದಿನ ಕಾರಣಗಳು ಹಾಗೂ ಅನುಸರಿಸಿರುವ ಆಡಳಿತಾತ್ಮಕ ಪ್ರಕ್ರಿಯೆಗಳನ್ನು ಗಮನಿಸಿದರೆ ಹಲವು ಅನುಮಾನಗಳು ಮೂಡುತ್ತವೆ. ಈ ವರ್ಗಾವಣೆಯು ನಿಯಮಾನುಸಾರ ನಡೆದಿದೆಯೇ ಅಥವಾ ರಾಜಕೀಯ ಒತ್ತಡಕ್ಕೆ ಮಣಿದು ಕೈಗೊಂಡ ನಿರ್ಧಾರವೇ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಪ್ರಸ್ತುತ ಪದವೀಧರರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುವ ಸಂದರ್ಭದಲ್ಲಿ ಅಧಿಕಾರಿಯೊಬ್ಬರನ್ನು ಏಕಾಏಕಿ ವರ್ಗಾವಣೆ ಮಾಡಿರುವುದು ಪ್ರಶ್ನಾರ್ಹವಾಗಿದೆ. ಚುನಾವಣಾ ಪ್ರಕ್ರಿಯೆಗೆ ನೇರವಾಗಿ ಅಥವಾ ಪರೋಕ್ಷವಾಗಿ ಸಂಬಂಧಿಸಿದ ಅಧಿಕಾರಿಗಳ ವರ್ಗಾವಣೆಗೆ ಚುನಾವಣಾ ಆಯೋಗದ ಪೂರ್ವಾನುಮತಿ ಅಗತ್ಯವಿರುವ ನಿಯಮಗಳಿವೆ. ಹೀಗಿರುವಾಗ ವೆಂಕಟೇಶ್ ಗಲಗ್ ಅವರ ವರ್ಗಾವಣೆಗೆ ಯಾವ ಆಧಾರದಲ್ಲಿ ಆದೇಶ ಹೊರಡಿಸಲಾಗಿದೆ? ಚುನಾವಣಾ ಆಯೋಗದಿಂದ ಅನುಮತಿ ಪಡೆಯಲಾಗಿದೆಯೇ ಎಂಬುದನ್ನು ಸಂಬಂಧಪಟ್ಟವರು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಪಂಚಾಯಿತಿ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಮಾತ್ರ ಇಲಾಖೆಯನ್ನು ಬಿಟ್ಟು ನಿಯೋಜನೆ ಆಧಾರದಲ್ಲಿ ಹತ್ತು ವರ್ಷಗಳಿಗೂ ಹೆಚ್ಚು ಕಾಲ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳಿದ್ದಾರೆ. ಅಂತಹವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದ ಸರ್ಕಾರ, ವೆಂಕಟೇಶ್ ಗಲಗ್ ಅವರನ್ನು ಮಾತ್ರ ಈ ಸಂದರ್ಭದಲ್ಲಿ ವರ್ಗಾವಣೆ ಮಾಡಿರುವುದೇಕೆ? ಅಧಿಕಾರಿಗಳ ವರ್ಗಾವಣೆ ವಿಚಾರದಲ್ಲಿ ಸರ್ಕಾರ ಎಲ್ಲರಿಗೂ ಒಂದೇ ರೀತಿಯ ನಿಯಮಗಳನ್ನು ಅನ್ವಯಿಸಬೇಕು ಎಂದು ಪ್ರಶ್ನಿಸಿದರು.

ವೆಂಕಟೇಶ್ ಗಲಗ್ ಅವರು ತಮ್ಮ ಕರ್ತವ್ಯದ ಅವಧಿಯಲ್ಲಿ ವಿವಿಧ ತಾಲೂಕುಗಳ ಸಣ್ಣ ಗುತ್ತಿಗೆದಾರರಿಗೆ ಕೆಲಸದ ಅವಕಾಶ ದೊರೆಯುವಂತೆ ಸಹಕರಿಸಿದ್ದಾರೆ. ಇದರಿಂದ ಅನೇಕ ಸಣ್ಣ ಗುತ್ತಿಗೆದಾರರು ಜೀವನೋಪಾಯ ಕಂಡುಕೊಳ್ಳುತ್ತಿದ್ದಾರೆ. ಇಂತಹ ಅಧಿಕಾರಿಯ ವರ್ಗಾವಣೆಯ ಹಿಂದೆ ರಾಜಕೀಯ ಕಾರಣಗಳಿದ್ದರೆ ಅದು ಸರಿಯಾದ ಬೆಳವಣಿಗೆಯಲ್ಲ ಎಂದು ಅಭಿಪ್ರಾಯಪಟ್ಟರು.

ವೆಂಕಟೇಶ್ ಗಲಗ್ ಅವರು ದೇವದುರ್ಗ ವಿಧಾನಸಭಾ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸುವುದಾಗಿ ಎಲ್ಲಿಯೂ ಅಧಿಕೃತವಾಗಿ ಘೋಷಿಸಿಲ್ಲ. ಆದರೂ ಅವರ ಬಗ್ಗೆ ಕೆಲವರಿಗೆ ಆತಂಕವೇಕೆ ಎಂಬುದು ಅರ್ಥವಾಗುತ್ತಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಗೆ ಸ್ಪರ್ಧಿಸುವ ಹಕ್ಕು ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಇದೆ. ಯಾರನ್ನು ಗೆಲ್ಲಿಸಬೇಕು ಅಥವಾ ಸೋಲಿಸಬೇಕು ಎಂಬ ಅಂತಿಮ ನಿರ್ಧಾರವನ್ನು ಮತದಾರರೇ ಕೈಗೊಳ್ಳುತ್ತಾರೆ. ಹೀಗಿರುವಾಗ ರಾಜಕೀಯ ದ್ವೇಷವನ್ನು ಮುಂದಿಟ್ಟುಕೊಂಡು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದು ಸರಿಯಲ್ಲ ಎಂದು ಹೇಳಿದರು.

ರಾಜಕೀಯದಲ್ಲಿ ಭಿನ್ನಾಭಿಪ್ರಾಯಗಳು ಸಹಜ. ಆದರೆ ವೈಯಕ್ತಿಕ ದ್ವೇಷವೇ ರಾಜಕೀಯದ ಮುಖ್ಯ ಉದ್ದೇಶವಾಗಬಾರದು. ಜನಪ್ರತಿನಿಧಿಗಳು ಪರಸ್ಪರ ಆರೋಪ-ಪ್ರತ್ಯಾರೋಪಗಳಲ್ಲಿ ತೊಡಗುವುದಕ್ಕಿಂತ ಕ್ಷೇತ್ರದ ಅಭಿವೃದ್ಧಿ, ಸಾರ್ವಜನಿಕ ಸಮಸ್ಯೆಗಳ ಪರಿಹಾರ ಹಾಗೂ ಜನರ ಹಿತಾಸಕ್ತಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ವೆಂಕಟೇಶ್ ಗಲಗ್ ಅವರ ವರ್ಗಾವಣೆಗೆ ಸಂಬಂಧಿಸಿದಂತೆ ಸರ್ಕಾರ ಮರುಪರಿಶೀಲನೆ ನಡೆಸಿ ಆದೇಶವನ್ನು ತಕ್ಷಣ ರದ್ದುಗೊಳಿಸಬೇಕು. ಇಲ್ಲದಿದ್ದರೆ ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸುವ ಮೂಲಕ ಸರ್ಕಾರದ ಗಮನ ಸೆಳೆಯಲಾಗುವುದು. ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವ ಅನಿವಾರ್ಯತೆ ಎದುರಾಗಲಿದೆ ಎಂದು ವಿಶ್ವನಾಥ್ ಬಲ್ಲಿದವ್ ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರಂಗಪ್ಪ ಗೋಸಲ್, ಮಾನಶಯ್ಯ, ಗುಂಡಪ್ಪ ನಾಯಕ್, ಬಾಬು ಗೌರಂಪೇಟೆ, ಬಾಬು ಕವಾಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಕೀಲರು ನಿಯಮಿತ ಆರೋಗ್ಯ ತಪಾಸಣೆಗೆ ಆದ್ಯತೆ ನೀಡಲಿ: ನ್ಯಾಯಾಧೀಶ ಕಂಚಿ ಮಾಯಣ್ಣ ಗೌತಮ್



ಮಾನ್ವಿ, ಅ.8: ಕಕ್ಷಿದಾರರಿಗೆ ನ್ಯಾಯ ಒದಗಿಸುವ ಜವಾಬ್ದಾರಿಯೊಂದಿಗೆ ನಿರಂತರವಾಗಿ ವೃತ್ತಿಪರ ಚಟುವಟಿಕೆಗಳಲ್ಲಿ ತೊಡಗಿರುವ ವಕೀಲರು ತಮ್ಮ ಆರೋಗ್ಯದ ಬಗ್ಗೆಯೂ ಹೆಚ್ಚಿನ ಕಾಳಜಿ ವಹಿಸಬೇಕು. ಕೆಲಸದ ಒತ್ತಡದಿಂದ ಉಂಟಾಗಬಹುದಾದ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಕನಿಷ್ಠ ಮೂರು ತಿಂಗಳಿಗೊಮ್ಮೆಯಾದರೂ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯ ಎಂದು ಮಾನ್ವಿಯ ಹಿರಿಯ ಶ್ರೇಣಿ ನ್ಯಾಯಾಧೀಶ ಕಂಚಿ ಮಾಯಣ್ಣ ಗೌತಮ್ ಸಲಹೆ ನೀಡಿದರು.

ಪಟ್ಟಣದ ವಕೀಲರ ಸಂಘ, ತಾಲೂಕು ಕಾನೂನು ಸೇವಾ ಪ್ರಾಧಿಕಾರ ಹಾಗೂ ಬೆಂಗಳೂರಿನ ಸ್ವಾಸ್ಥ್ಯ ಆರೋಗ್ಯ ಕ್ಲಿನಿಕ್ ಸಹಯೋಗದಲ್ಲಿ ವಕೀಲರ ಸಂಘದ ಸದಸ್ಯರಿಗಾಗಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನ್ಯಾಯಾಂಗ ವ್ಯವಸ್ಥೆಯಲ್ಲಿ ವಕೀಲರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಾರ್ವಜನಿಕರ ಸಮಸ್ಯೆಗಳಿಗೆ ಕಾನೂನಾತ್ಮಕ ಪರಿಹಾರ ಒದಗಿಸುವುದು, ಕಕ್ಷಿದಾರರ ಹಿತಾಸಕ್ತಿ ಕಾಪಾಡುವುದು ಹಾಗೂ ನ್ಯಾಯಾಲಯದ ಕಲಾಪಗಳಲ್ಲಿ ಭಾಗವಹಿಸುವಂತಹ ಹಲವು ಜವಾಬ್ದಾರಿಗಳನ್ನು ವಕೀಲರು ನಿರ್ವಹಿಸುತ್ತಾರೆ. ಈ ಕಾರ್ಯಗಳ ನಡುವೆ ವೈಯಕ್ತಿಕ ಆರೋಗ್ಯದ ಕಡೆ ನಿರ್ಲಕ್ಷ್ಯ ವಹಿಸುವುದು ಸರಿಯಲ್ಲ ಎಂದು ತಿಳಿಸಿದರು.

ದೈಹಿಕ ಹಾಗೂ ಮಾನಸಿಕ ಆರೋಗ್ಯ ಉತ್ತಮವಾಗಿದ್ದಾಗ ಮಾತ್ರ ವೃತ್ತಿಪರ ಕರ್ತವ್ಯಗಳನ್ನು ಸಮರ್ಥವಾಗಿ ನಿರ್ವಹಿಸಲು ಸಾಧ್ಯವಾಗುತ್ತದೆ. ಆದ್ದರಿಂದ ವಕೀಲರು ತಮ್ಮ ದಿನನಿತ್ಯದ ಕೆಲಸಗಳ ಜೊತೆಗೆ ಆರೋಗ್ಯ ರಕ್ಷಣೆಗೆ ಅಗತ್ಯ ಸಮಯ ಮೀಸಲಿಡಬೇಕು. ನಿಯಮಿತ ವೈದ್ಯಕೀಯ ತಪಾಸಣೆಯಿಂದ ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿಯೇ ಗುರುತಿಸಿ ಸೂಕ್ತ ಚಿಕಿತ್ಸೆ ಪಡೆಯಲು ಅನುಕೂಲವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ನ್ಯಾಯಾಧೀಶ ಕಂಚಿ ಮಾಯಣ್ಣ ಗೌತಮ್ ಅವರು ಸ್ವತಃ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಶಿಬಿರಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಸಿವಿಲ್ ನ್ಯಾಯಾಧೀಶ ಆನಂದ್ ಕೊಣ್ಣೂರ್, ಮಾನ್ವಿ ವಕೀಲರ ಸಂಘದ ಅಧ್ಯಕ್ಷ ರವಿಕುಮಾರ್ ಪಾಟೀಲ್, ಉಪಾಧ್ಯಕ್ಷ ವಿಶ್ವನಾಥ್ ರಾಯಪ್ಪ, ಹಿರಿಯ ವಕೀಲರಾದ ಬಿ.ಕೆ. ಅಮರೇಶಪ್ಪ, ಅಯ್ಯಪ್ಪ ನಾಯಕ, ಶ್ರೀನಿವಾಸ್ ರಾವ್ ಕುಲಕರ್ಣಿ, ಡಿ. ರವಿಕುಮಾರ್, ಅರವಿಂದ್ ದೇಸಾಯಿ ಸೇರಿದಂತೆ ವಕೀಲರ ಸಂಘದ ಸದಸ್ಯರು ಹಾಗೂ ನ್ಯಾಯಾಲಯದ ಸಿಬ್ಬಂದಿ ಭಾಗವಹಿಸಿ ಉಚಿತ ಆರೋಗ್ಯ ತಪಾಸಣೆಯ ಸೌಲಭ್ಯ ಪಡೆದುಕೊಂಡರು.

# 82 ವರ್ಷದ ರಾಮಣ್ಣ ಚಲವಾದಿ ಕಾಣೆ; ಪತ್ತೆಹಚ್ಚಿದವರಿಗೆ ₹21 ಸಾವಿರ ಬಹುಮಾನ



ಲಿಂಗಸುಗೂರು: ಪುರಸಭೆ ವ್ಯಾಪ್ತಿಯ ಕಸಬಾ ಲಿಂಗಸುಗೂರು ಗ್ರಾಮದ 82 ವರ್ಷದ ರಾಮಣ್ಣ ಚಲವಾದಿ ಅವರು ಕಾಣೆಯಾಗಿದ್ದು, ಅವರನ್ನು ಪತ್ತೆಹಚ್ಚಿ ಮಾಹಿತಿ ನೀಡುವವರಿಗೆ ₹21 ಸಾವಿರ ಬಹುಮಾನ ನೀಡಲಾಗುವುದು ಎಂದು ಅವರ ಹಿರಿಯ ಪುತ್ರ ರವೀಂದ್ರ ಚಲವಾದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಮಣ್ಣ ಚಲವಾದಿ ಅವರ ಬಗ್ಗೆ ಯಾವುದೇ ಮಾಹಿತಿ ದೊರೆತಲ್ಲಿ ಕುಟುಂಬದವರನ್ನು ಸಂಪರ್ಕಿಸುವಂತೆ ಮನವಿ ಮಾಡಲಾಗಿದೆ. ಅವರನ್ನು ಸುರಕ್ಷಿತವಾಗಿ ಪತ್ತೆಹಚ್ಚಲು ಸಾರ್ವಜನಿಕರು ಸಹಕರಿಸಬೇಕು ಎಂದು ಕುಟುಂಬಸ್ಥರು ಕೋರಿದ್ದಾರೆ.

ಮಾಹಿತಿಗಾಗಿ ಮೊ.: 9845606550, 9945531337 ಸಂಪರ್ಕಿಸಬಹುದು.

# ಹೊಸೂರು ಸಿದ್ದಾಪುರದಲ್ಲಿ ಶ್ರೀ ಉಟಕನೂರು ತಾತನವರ 31ನೇ ಜಾತ್ರಾ ಮಹೋತ್ಸವ ಸಂಭ್ರಮ



ಜಾಲಹಳ್ಳಿ, ಅ.8: ದೇವದುರ್ಗ ತಾಲೂಕಿನ ಹೊಸೂರು ಸಿದ್ದಾಪುರ ಗ್ರಾಮದಲ್ಲಿ ಎರಡು ದಿನಗಳ ಕಾಲ ನಡೆದ ಶ್ರೀ ಉಟಕನೂರು ತಾತನವರ 31ನೇ ಜಾತ್ರಾ ಮಹೋತ್ಸವ ಹಾಗೂ ಮಹಾದಾಸೋಹ ಭಕ್ತಿಭಾವ ಮತ್ತು ಸಡಗರದಿಂದ ಯಶಸ್ವಿಯಾಗಿ ಸಂಪನ್ನಗೊಂಡಿತು.

ಕಳೆದ 31 ವರ್ಷಗಳಿಂದ ನಿರಂತರವಾಗಿ ನಡೆಯುತ್ತಿರುವ ಜಾತ್ರಾ ಮಹೋತ್ಸವದಲ್ಲಿ ಹೊಸೂರು ಸಿದ್ದಾಪುರ ಸೇರಿದಂತೆ ಸುತ್ತಮುತ್ತಲಿನ ವಿವಿಧ ಗ್ರಾಮಗಳ ಸಾವಿರಾರು ಭಕ್ತರು ಪಾಲ್ಗೊಂಡು ಶ್ರೀ ಮರಿಬಸವಲಿಂಗ ತಾತನವರ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಜಾತ್ರೆಯ ಮೊದಲ ದಿನವಾದ ಅ.7ರಂದು ಸಂಜೆ ಶ್ರೀ ಮರಿಬಸವಲಿಂಗ ತಾತನವರ ಗದ್ದುಗೆಗೆ ವಿಶೇಷ ಪೂಜೆ ನೆರವೇರಿಸಲಾಯಿತು. ನಂತರ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಭಜನಾ ಮಂಡಳಿಗಳು ಹಾಗೂ ಸ್ಥಳೀಯ ಗ್ರಾಮಸ್ಥರಿಂದ ರಾತ್ರಿ ಪೂರ್ತಿ ಭಜನಾ ಕಾರ್ಯಕ್ರಮ ನಡೆಯಿತು. ಮುಂಜಾನೆಯಿಂದ ಮಧ್ಯಾಹ್ನದವರೆಗೂ ಭಕ್ತಿಗೀತೆ ಹಾಗೂ ಭಜನೆಗಳು ಮುಂದುವರಿದು ಜಾತ್ರಾ ಸ್ಥಳದಲ್ಲಿ ಭಕ್ತಿಮಯ ವಾತಾವರಣ ನಿರ್ಮಾಣವಾಗಿತ್ತು.

ಅದೇ ದಿನ ಸಂಜೆ ಆಯೋಜಿಸಿದ್ದ ಗಾನಸುಧೆ ಕಾರ್ಯಕ್ರಮದಲ್ಲಿ ಶಿವಲಿಂಗಯ್ಯ ಸ್ವಾಮಿ ಗಲಗ, ನಾಗರಾಜ ಏರುಂಡಿ ಹಾಗೂ ಈರಯ್ಯ ತಾತ ಜಾಲಹಳ್ಳಿ ಅವರು ಭಕ್ತಿಗೀತೆ ಹಾಗೂ ಸಂಗೀತ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿ ನೆರೆದಿದ್ದ ಭಕ್ತರನ್ನು ರಂಜಿಸಿದರು. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮಸ್ಥರು ಹಾಗೂ ಭಕ್ತರು ಭಾಗವಹಿಸಿದ್ದರು.

ಅ.8ರಂದು ಜಾತ್ರೆಯ ಅಂಗವಾಗಿ ಆಯೋಜಿಸಿದ್ದ ಗ್ರಾಮೀಣ ಕ್ರೀಡಾ ಸ್ಪರ್ಧೆಗಳು ಗಮನ ಸೆಳೆದವು. ಉಸುಕಿನ ಚೀಲ ಎತ್ತುವ ಸ್ಪರ್ಧೆಯಲ್ಲಿ ಮಸರಕಲ್ ಗ್ರಾಮದ ಮುದುಕಪ್ಪ ನಾಯಕ ಪ್ರಥಮ ಸ್ಥಾನ ಪಡೆದು 5 ತೊಲಿ ಬೆಳ್ಳಿ ಕಡಗವನ್ನು ಬಹುಮಾನವಾಗಿ ಪಡೆದರು. ಸಾಬಣ್ಣ ಕರಿಗುಡ್ಡ ದ್ವಿತೀಯ ಸ್ಥಾನ ಪಡೆದು ₹2,500 ನಗದು ಬಹುಮಾನ ಪಡೆದರು.

ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯಲ್ಲಿ 118 ಕೆ.ಜಿ. ತೂಕದ ಕಲ್ಲನ್ನು ಎತ್ತಿದ ರಾಯಚೂರು ತಾಲೂಕಿನ ನಾಗಲದೊಡ್ಡಿಯ ಪ್ರತಾಪ್ ನಾಯಕ ಪ್ರಥಮ ಸ್ಥಾನ ಪಡೆದು 5 ತೊಲಿ ಬೆಳ್ಳಿ ಕಡಗವನ್ನು ತಮ್ಮದಾಗಿಸಿಕೊಂಡರು. ದೇವದುರ್ಗದ ಅಂಜು ನಾಯಕ ದ್ವಿತೀಯ ಸ್ಥಾನ ಪಡೆದು ₹2,500 ನಗದು ಬಹುಮಾನ ಪಡೆದರು.

ಗ್ರಾಮೀಣ ಕ್ರೀಡಾ ಪರಂಪರೆಯನ್ನು ಉತ್ತೇಜಿಸುವ ಉದ್ದೇಶದಿಂದ ಆಯೋಜಿಸಿದ್ದ ಸ್ಪರ್ಧೆಗಳಲ್ಲಿ ಯುವಕರು ಉತ್ಸಾಹದಿಂದ ಪಾಲ್ಗೊಂಡು ತಮ್ಮ ದೈಹಿಕ ಸಾಮರ್ಥ್ಯ ಪ್ರದರ್ಶಿಸಿದರು. ಸ್ಪರ್ಧೆಗಳನ್ನು ವೀಕ್ಷಿಸಲು ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮಸ್ಥರು ಹಾಗೂ ಭಕ್ತರು ಸೇರಿದ್ದರು.

ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಮಹಾದಾಸೋಹದಲ್ಲಿ ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿದರು. ವಿಶೇಷ ಪೂಜೆ, ಭಜನೆ, ಗಾನಸುಧೆ, ಮಹಾದಾಸೋಹ ಹಾಗೂ ಗ್ರಾಮೀಣ ಕ್ರೀಡಾ ಸ್ಪರ್ಧೆಗಳೊಂದಿಗೆ ಎರಡು ದಿನಗಳ ಶ್ರೀ ಉಟಕನೂರು ತಾತನವರ 31ನೇ ಜಾತ್ರಾ ಮಹೋತ್ಸವ ಭಕ್ತಿಭಾವದಿಂದ ತೆರೆ ಕಂಡಿತು.

# ಅ.12 ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ವ್ಯೂವ್

ಕೊಪ್ಪಳ, ಅ. 08, (ಕರ್ನಾಟಕ ವಾರ್ತೆ): ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್-ಇಂಟರ್‌ವ್ಯೂವನ್ನು ಅಕ್ಟೋಬರ್ 12 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕೊಪ್ಪಳ ಜಿಲ್ಲಾ ಆಡಳಿತ ಭವನದ ಮೊದಲನೇ ಮಹಡಿಯಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಪಿ.ಯು.ಸಿ ಅಥವಾ ಯಾವುದೇ ಪದವಿ ಪಡೆದ ಅಭ್ಯರ್ಥಿಗಳು ಈ ವಾಕ್ ಇನ್ ಇಂಟರ್‌ವ್ಯೂವ್ ನಲ್ಲಿ ಭಾಗವಹಿಸಬಹುದು. 18 ರಿಂದ 30 ವರ್ಷದ ಅರ್ಹ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 3 ಪ್ರತಿಗಳೊಂದಿಗೆ ಮತ್ತು ಆಧಾರ್ ಕಾರ್ಡಿನ ಪ್ರತಿ, ಬಯೋಡಾಟಾ (ರೆಜ್ಯುಮ್) ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ರೈತ ಸಂಘ ಆಗ್ರಹ



ಲಿಂಗಸುಗೂರು: ತಾಲೂಕಿನಲ್ಲಿ ರೈತರು ಬರ, ಬೆಳೆ ನಷ್ಟ, ಬೆಳೆ ವಿಮೆ ಬಾಕಿ, ವಿದ್ಯುತ್ ಕೊರತೆ ಹಾಗೂ ಕೃಷಿ ಪರಿಕರಗಳ ಬೆಲೆ ಏರಿಕೆ ಸೇರಿದಂತೆ ಹಲವು ಸಮಸ್ಯೆಗಳಿಂದ ಸಂಕಷ್ಟದಲ್ಲಿದ್ದು, ಸರ್ಕಾರ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ರೈತ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಸಣ್ಣ ನೀರಾವರಿ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರಿಗೆ ಮನವಿ ಸಲ್ಲಿಸಿದರು.

ತಾಲೂಕಿನ ಕಬ್ಬು ಬೆಳೆಗಾರರು ಸೂಕ್ತ ಬೆಲೆ ಸಿಗದೆ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ಕಬ್ಬಿಗೆ ಪ್ರತಿ ಕ್ವಿಂಟಲ್‌ಗೆ ₹3,300ರಿಂದ ₹6,300ರವರೆಗೆ ಬೆಂಬಲ ಬೆಲೆ ನಿಗದಿಪಡಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಕಳೆದ ನಾಲ್ಕೈದು ವರ್ಷಗಳಿಂದ ರೈತರು ನಿಯಮಿತವಾಗಿ ಬೆಳೆ ವಿಮೆ ಪಾವತಿಸುತ್ತಿದ್ದರೂ, ಹಲವರಿಗೆ ಇನ್ನೂ ವಿಮಾ ಪರಿಹಾರ ದೊರೆತಿಲ್ಲ. ಸಂಬಂಧಪಟ್ಟ ವಿಮಾ ಕಂಪನಿಗಳಿಂದ ಬಾಕಿ ಇರುವ ವಿಮಾ ಮೊತ್ತವನ್ನು ಕೂಡಲೇ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಬರ ಹಾಗೂ ಮಳೆಯ ಕೊರತೆಯಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಎಕರೆಗೆ ₹25 ಸಾವಿರದಂತೆ ಪರಿಹಾರ ನೀಡಬೇಕು. ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿದಿನ ಕನಿಷ್ಠ 10 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಬೇಕು. ತಾಲೂಕಿನಲ್ಲಿ ತೋಟ ಹಾಗೂ ದೊಡ್ಡಿಗಳಲ್ಲಿರುವ ಮನೆಗಳಿಗೆ ಸಿಂಗಲ್‌ಫೇಸ್ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದು ಮನವಿ ಮಾಡಿದ್ದಾರೆ.

ರಸಗೊಬ್ಬರ, ಕೀಟನಾಶಕ ಸೇರಿದಂತೆ ಕೃಷಿಗೆ ಅಗತ್ಯವಿರುವ ಪರಿಕರಗಳ ಬೆಲೆ ಏರಿಕೆಯಿಂದ ರೈತರ ಉತ್ಪಾದನಾ ವೆಚ್ಚ ಹೆಚ್ಚುತ್ತಿದೆ. ಇವುಗಳ ದರವನ್ನು ನಿಯಂತ್ರಿಸಿ ರೈತರಿಗೆ ಕೈಗೆಟುಕುವ ಬೆಲೆಯಲ್ಲಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು. ಕೃತಕ ಅಭಾವ ಸೃಷ್ಟಿಸಿ ಬೆಲೆ ಏರಿಕೆ ಮಾಡುವುದು ಹಾಗೂ ಕಾಳಸಂತೆ ವ್ಯಾಪಾರ ನಡೆಸುವವರ ವಿರುದ್ಧ ಸಂಬಂಧಪಟ್ಟ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಶಿವರಾಜ ಗೌಡೂರು, ತಿಮ್ಮಪ್ಪ ಪೂಜಾರಿ, ರಂಗಪ್ಪ, ದುರಗಪ್ಪ ಪೂಲಭಾವಿ, ಬಾಲಯ್ಯ, ಹನುಮಂತ ಪರಾಂಪೂರ, ತಿಮ್ಮಪ್ಪ ಮಾನ್ವಿ, ಆದಪ್ಪ, ಬಸಪ್ಪ ದೊಡ್ಡಮನಿ, ಶಿವಪ್ಪ ಬಡಿಗೇರ, ಲಕ್ಷ್ಮಣ, ದುರಗಪ್ಪ, ದಾವಲಸಾಬ್, ಹನುಮಂತ, ಅಯ್ಯಪ್ಪ, ಅಮರಗುಂಡಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ: ಅ.13 ರಂದು ಪೂರ್ವಭಾವಿ ಸಭೆ

ಕೊಪ್ಪಳ, ಅ. 08, (ಕರ್ನಾಟಕ ವಾರ್ತೆ): ಸರ್ಕಾರದ ನಿರ್ದೇಶನದ ಪ್ರಕಾರ ಪ್ರತಿವರ್ಷದಂತೆ ಈ ವರ್ಷವೂ ಸಹ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅಕ್ಟೋಬರ್ 26 ರಂದು ಜಿಲ್ಲಾ ಕೇಂದ್ರಸ್ಥಾನದಲ್ಲಿ ಆಚರಿಸಬೇಕಾಗಿರುವುದರಿಂದ ಈ ಕುರಿತು ಚರ್ಚಿಸಲು ಅಕ್ಟೋಬರ್ 13 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ.ಇಟ್ನಾಳ ಅವರು ವಹಿಸಿಕೊಳ್ಳಲಿದ್ದು, ಈ ಸಭೆಗೆ ಸಂಬಧಿಸಿದ ಸಮುದಾಯದ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಸಂಘ-ಸಸ್ಥೆಗಳ ಅಧ್ಯಕ್ಷರುಗಳು, ಪದಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಹಾಗೂ ಪತ್ರಿಕಾ ಮಾಧ್ಯಮದವರು ಸಭೆಗೆ ಆಗಮಿಸಿ ಸೂಕ್ತ ಸಲಹೆ ಸೂಚನೆಗಳನ್ನು ನೀಡುವಂತೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K